# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 192 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–02–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 192 | Title- Code: KARKAN 28269 | Chitradurga | Date: 15-02-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**
ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾಗೆ ಅಭೂತಪೂರ್ವ ಸ್ಪಂದನೆ: ಡಿಸಿ ವೆಂಕಟೇಶ್ 2
ಅಡಿಕೆ ಉತ್ಪಾದನೆ: ಕರ್ನಾಟಕ ದೇಶದಲ್ಲಿಯೇ ಮೊದಲ ಸ್ಥಾನ 3
ಶಾಸಕ ರಘುಮೂರ್ತಿ ವಿವಿಧ ದೇವಸ್ಥಾನಗಳಿಗೆ ಭೇಟಿ, ಪೂಜೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಮನುಷ್ಯನ ದೊಡ್ಡ ಶತ್ರು ಅಹಂಕಾರ ಮತ್ತು ಅಜ್ಞಾನ. ಮನುಷ್ಯನ ದೊಡ್ಡ ಮಿತ್ರ ನಂಬಿಕೆ ಮತ್ತು ನಗು. ಆದಾಯ ಎನ್ನುವುದು ಒಂದು ಪಾದರಕ್ಷೆ ಇದ್ದಂತೆ. "ಚಿಕ್ಕದಾದರೆ ಕಚ್ಚುತ್ತದೆ", "ದೊಡ್ಡದಾದರೆ ಹೆಜ್ಜೆ ತಪ್ಪುತ್ತದೆ"

» ಶುಭೋದಯ

### ಮಾದಕ ವಸ್ತುಗಳ ನಿಯಂತ್ರಣ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಭೆಯಲ್ಲಿ ಜಿಲ್ಲಾಧಿಕಾರಿ ವೆಂಕಟೇಶ್.ಟಿ

# ತೀವ್ರ ನಿಗಾ, ಜಾಗೃತಿ ಮೂಡಿಸಲು ಸೂಚನೆ

» ಚಿತ್ರದುರ್ಗ

ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಪ್ರತಿಯೊಬ್ಬರು ನಿಗಾ ವಹಿಸಬೇಕು. ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗಬಹುದಾದ ದುಷ್ಪರಿಣಾಮಗಳ ಕುರಿತು ಆಂದೋಲನ ಮಾದರಿಯಲ್ಲಿ ಕಾರ್ಯಕ್ರಮ ಆಯೋಜಿಸಿ ಜಾಗೃತಿ ಮೂಡಿಸುವಂತೆ ಜಿಲ್ಲಾಧಿಕಾರಿ ವೆಂಕಟೇಶ್.ಟಿ ಸೂಚನೆ ನೀಡಿದರು.

ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಮಾದಕ ವಸ್ತುಗಳ ನಿಯಂತ್ರಣ ಕುರಿತಾದ ಜಿಲ್ಲಾ ಮಟ್ಟದ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವ ಜನರನ್ನು ಗುರಿಯಾಗಿಸಿಕೊಂಡು ನಗರ ಪ್ರದೇಶಗಳಲ್ಲಿರುವ ಇಂಜಿನಿಯರಿಂಗ್, ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ ಹಾಗೂ ಮೆಡಿಕಲ್ ಕಾಲೇಜು ಕ್ಯಾಂಪಸ್ ಸುತ್ತಮುತ್ತ ಗಾಂಜಾ ಸೇರಿದಂತೆ ಇತರೆ ಮಾದಕ ವಸ್ತುಗಳ ಮಾರಾಟ ನಡೆಯುವ ಸಂಭವ ಹೆಚ್ಚಿರುತ್ತದೆ. ಆದ್ದರಿಂದ ಕಾಲೇಜು ಕ್ಯಾಂಪಸ್‌ಗಳಲ್ಲಿ ಎಚ್ಚರಿಕೆಯಿಂದ ತೀವ್ರ ನಿಗಾ ವಹಿಸಬೇಕು. ಯಾವುದೇ ಕಾರಣಕ್ಕೂ ಇಂತಹ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಕಾಲೇಜುಗಳ ಜೊತೆ ಹಾಸ್ಟೆಲ್‌ಗಳಲ್ಲಿಯೂ ಮಾದಕ ವಸ್ತುಗಳ ಬಗ್ಗೆ ಆಗಾಗ್ಗೆ ಭೇಟಿ ನೀಡಿ ತಪಾಸಣೆ ನಡೆಸಬೇಕು. ಹಾಸ್ಟೆಲ್‌ಗಳಿಗೆ ಆಗಾಗ್ಗೆ ಬಂದು ಹೋಗುವ ಸಂಶಯಾಸ್ಪದ ವ್ಯಕ್ತಿಗಳ ಬಗ್ಗೆ ಗಮನ ಹರಿಸಬೇಕು. ಸಿಸಿ ಕ್ಯಾಮರಾಗಳನ್ನು ಅಳವಡಿಸಿ, ಪರಿಶೀಲಿಸುವ ಕಾರ್ಯ



ಆಗಬೇಕು. ಒಂದು ವೇಳೆ ಪೊಲೀಸ್ ಇಲಾಖೆ ಕಾರ್ಯಾಚರಣೆ ನಡೆಸಿ ಕಾಲೇಜು ಕ್ಯಾಂಪಸ್ ಹಾಸ್ಟೆಲ್‌ಗಳಲ್ಲಿ ಮಾದಕ ವಸ್ತುಗಳ ಜಾಲ ಪತ್ತೆಯಾದರೆ, ಸಂಬಂದಪಟ್ಟ ಕಾಲೇಜು ಪ್ರಾಂಶುಪಾಲರು ಹಾಗೂ ಮುಖ್ಯಸ್ಥರನ್ನೇ ಹೊಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಎಚ್ಚರಿಸಿದರು. ಮಾದಕ ವಸ್ತುಗಳು ವಿದ್ಯಾರ್ಥಿಗಳ ಆರೋಗ್ಯ, ಶಿಕ್ಷಣ, ಸಮಾಜ ಹಾಗೂ ಮಕ್ಕಳ ಭವಿಷ್ಯದ ಮೇಲೆಯೂ ದುಷ್ಪರಿಣಾಮ ಬೀರುವುದರಿಂದ ಕಾಲೇಜು ಮುಖ್ಯಸ್ಥರೇ ಜವಾಬ್ದಾರಿಯಿಂದ ವಿದ್ಯಾರ್ಥಿಗಳ ಕಾಳಜಿ ವಹಿಸಬೇಕು ಎಂದರು.ಮಾದಕ ವಸ್ತುಗಳ ಚಟುವಟಿಕೆ ಬಗ್ಗೆ ರಾಜ್ಯ ಸರ್ಕಾರ ಶೂನ್ಯ ಸಹಿಷ್ಣುತೆ: ಮಾದಕ ವಸ್ತುಗಳ ಚಟುವಟಿಕೆ ಬಗ್ಗೆ ರಾಜ್ಯ ಸರ್ಕಾರ ಶೂನ್ಯ ಸಹಿಷ್ಣುತೆ ಹೊಂದಿದೆ. ಮುಖ್ಯಮಂತ್ರಿಗಳು ಹಾಗೂ ಗೃಹಸಚಿವರು ಈ ಕುರಿತು ಸ್ಪಷ್ಟ ಸಂದೇಶದ ಮೂಲಕ ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಎನ್.ಡಿ.ಪಿ.ಎಸ್ (ಓಚಿಡಿಛಿoಣiಛಿ ಆಡಿug ಚಿಟಿಜ ಕಥಿಛಿhoಣಡಿoಠಿiಛಿ ಣubsಣಚಿಟಿಛಿes) ಕಾಯ್ದೆ ತುಂಬಾ ಕಠಿಣವಾಗಿದೆ. ಮಾದಕ ವಸ್ತುಗಳ ಸೇವನೆ ಸಾಬೀತು ಆದರೆ ನೇರವಾಗಿ ಎಫ್.ಐ.ಆರ್ ದಾಖಲಿಸಲಾಗುವುದು. ಕಾಯ್ದೆಯ ಅಡಿ ಮಾದಕ ವಸ್ತುಗಳ ಸೇವನೆ, ಮಾರಾಟ, ಸಾಗಾಣಿಕೆ ಹಾಗೂ ಮಾದಕ ವಸ್ತುಗಳ ಖರೀದಿಸಲು ಹಣ ಸಹಾಯ ನೀಡಿದವರ ಮೇಲೂ ಪ್ರಕರಣ ದಾಖಲಿಸಿ ಶಿಕ್ಷೆಗೆ ಗುರಿ ಪಡಿಸಲು ಅವಕಾಶವಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಗಾಂಜಾ ಹಾಗೂ ಇತರೆ ಮಾದಕ ವಸ್ತುಗಳ ಹೊರತಾಗಿ, ಟೈಯರ್ ಪಂಚರ್ ಹಾಕಲು ಬಳಸುವ ಸಲೂಷನ್, ವೈಟ್ನರ್, ಹೆಚ್ಚಿನ ಡೋಸೇಜ್ ಇರುವ ಕೆಮ್ಮಿನ ಔಷಧಿಗಳನ್ನು ಹದಿ ಹರೆಯದವರು ಬಳಸುತ್ತಿರುವುದಾಗಿ ವರದಿಯಿದ್ದು, ಈ ಕುರಿತು ಶಾಲಾ ಶಿಕ್ಷಕರು, ಪ್ರಾಂಶುಪಾಲರು ಹಾಗೂ ಪೋಷಕರು ಹೆಚ್ಚಿನ ನಿಗಾ ವಹಿಸಬೇಕು. ಗಾಂಜಾ, ಹೊರ ಜಿಲ್ಲೆ ಹಾಗೂ ಹೊರ ರಾಜ್ಯಗಳಿಂದಲೂ ಜಿಲ್ಲೆಗೆ ಸರಬರಾಜು ಆಗುತ್ತಿರುವ ಕುರಿತು ಮಾಹಿಗಳು ಇವೆ. ವಿದ್ಯಾರ್ಥಿಗಳು ಈ ವಿಷವರ್ತುಲಕ್ಕೆ ಸಿಕ್ಕಿಬೀಳುತ್ತಿದ್ದಾರೆ. ಈ ನಿಟ್ಟಿನಲ್ಲಿ ಡಿಸೆಂಬರ್ ಮಾಹೆಯಲ್ಲಿ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕಾಲೇಜುಗಳ ಸುತ್ತಮುತ್ತ ಗಾಂಜಾ ಮಾರಾಟ ಮಾಡುವುದು ಕಂಡುಬಂದರೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಬೇಕು. ಇದು ಗಾಂಜಾ ಬಳಕೆ ತಡೆಗೆ ಸಹಾಯವಾಗಲಿದೆ. ಗಾಂಜಾ ಸರಬರಾಜು ಮಾಡುವ ವ್ಯಕ್ತಿಗಳನ್ನು ಹಿಡಿಯುವುದು ಪೊಲೀಸರ ಮುಖ್ಯ ಗುರಿಯಾಗಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಮಾತನಾಡಿ, ಹಿರಿಯೂರು ಬಬ್ಬೂರು ಫಾರಂನಲ್ಲಿ ಕೃಷಿ ಅಧಿಕಾರಿಗಳು ಹಾಗೂ ಬೆಳೆ ಸಮೀಕ್ಷೆ ಮಾಡುವವರಿಗೆ ಗಾಂಜಾ ಬೆಳೆ ಗುರುತಿಸಿ, ಪೊಲೀಸ್ ಇಲಾಖೆಗೆ ಮಾಹಿತಿ ನೀಡುವ ಕುರಿತು ತರಬೇತಿ ಕಾರ್ಯಗಾರ ನಡೆಸಲಾಗಿದೆ ಎಂದರು.

ಗಾಂಜಾ ಬೆಳೆಯನ್ನು ಸಾಮಾನ್ಯವಾಗಿ ಬೋರ್‌ವೆಲ್ ಸೌಲಭ್ಯ ಇರುವ ಜಮೀನುಗಳಲ್ಲಿ ಬೆಳೆಯುವ ಸಂಭವ ಇರುತ್ತದೆ ಆದ್ದರಿಂದ ಕೃಷಿ ಅಧಿಕಾರಿಗಳು ಇಂತಹ ಜಮೀನುಗಳಲ್ಲಿ ಹೆಚ್ಚಿನ ಗಮನಹರಿಸಬೇಕು, ಸ್ವಲ್ಪ ಸುಳಿವು ದೊರೆತರೂ, ತಕ್ಷಣವೇ ಕ್ರಮಕ್ಕೆ ಮುಂದಾಗಬೇಕು ಎಂದರು.

ಜಿಲ್ಲೆಯ ಎಲ್ಲಾ ಔಷಧಿ ಅಂಗಡಿಗಳಲ್ಲಿ ವೈದ್ಯರ ಶಿಫಾರಸ್ಸು ಇಲ್ಲದೆ, ಕೆಲವು ರಾಸಾಯನಿಕ ಸಂಯೋಜನೆ ಇರುವ ಕೆಮ್ಮಿನ ಔಷಧಿಗಳನ್ನು ಮಾರಾಟ ಮಾಡಬಾರದು. ಕಾಲಕಾಲಕ್ಕೆ ಔಷಧಿ ಅಂಗಡಿಗಳ ಸ್ಟಾಕ್ ಬುಕ್ ಪರಿಶೀಲನೆ ನಡೆಸಬೇಕು. ಎಲ್ಲಾ ಅಂಗಡಿಗಳಲ್ಲಿ ಕಡ್ಡಾಯವಾಗಿ ಸಿಸಿ ಟಿವಿ ಅಳವಡಿಸಲು ಸೂಚನೆ ನೀಡುವಂತೆ ಸಹಾಯಕ ಔಷಧ ನಿಯಂತ್ರಕರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಹೇಳಿದರು.ಸಭೆಯಲ್ಲಿ ಅಬಕಾರಿ ಇಲಾಖೆ ಉಪ ಆಯುಕ್ತ ಬಿ.ಮಾದೇಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ವಿವಿಧ ಕಾಲೇಜುಗಳು ಪ್ರಾಂಶುಪಾಲರು, ಮುಖ್ಯಸ್ಥರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಫೆ.15 ರಂದು ಸಂತ ಸೇವಾಲಾಲ್ ಜಯಂತಿ



» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಇವರ ಸಹಯೋಗದಲ್ಲಿ ಫೆ.15 ರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರು ಕೆ. ಅನ್ವರ್ ಭಾಷ ಗೌರವಾನ್ವಿತ ವ್ಯಕ್ತಿಗಳಾಗಿ ಭಾಗವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ ಗೋವಿಂದಪ್ಪ, ಟಿ. ರಘುಮೂರ್ತಿ, ಡಾ. ಎಂ. ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಜಿಲ್ಲಾ ಬಂಜಾರ ಸಂಘದ ಅಧ್ಯಕ್ಷ ಆರ್.ನಾಗೇಂದ್ರನಾಯ್ಕ, ಜಿಲ್ಲಾ ಬಂಜಾರ ಸಂಘದ ಗೌರವಾಧ್ಯಕ್ಷ ಜಿ.ರಾಜನಾಯ್ಕ, ಕಾರ್ಯದರ್ಶಿ ಕೆ.ಮಂಜುನಾಥನಾಯ್ಕ, ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರಣ್ ಕುಮಾರ್, ಗ್ರಾ.ಪಂ. ಸದಸ್ಯೆ ಕಾವ್ಯಬಾಯಿ ಹಾಗೂ ಜಿಲ್ಲೆಯ ಗೌರವಾನ್ವಿತ ಪ್ರತಿನಿಧಿಗಳು, ಬಂಜಾರ ಸಮುದಾಯದ ಸಮಸ್ತ ಗೌರವಾನ್ವಿತ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಕನ್ನಡ ಉಪನ್ಯಾಸಕ ಟಿ.ಎಲ್. ನಾರಾಯಣ್ ನಾಯ್ಕ್ ಉಪನ್ಯಾಸ ನೀಡುವರು.. ಆಯಿತೋಳ ಜಗದೀಶ್ ಮತ್ತು ತಂಡ ಗೀತಗಾಯನ ಪ್ರಸ್ತುತ ಪಡಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದು 108 ಬಾರಿ ಸೂರ್ಯ ಸಮಸ್ಕಾರ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ ಹಾಗೂ ವಿದ್ಯಾ ನಗರ ಕ್ಷೇಮಾಭೀವೃದ್ದಿ ಸಂಘದವತಿಯಿಂದ ರಥ ಸಪ್ತಮಿ ಪ್ರಯುಕ್ತ ಫೆ. 16ರಂದು ಬೆಳಿಗ್ಗೆ 5.30 ರಿಂದ 7.30ರವರೆಗೆ ಚಿತ್ರದುರ್ಗ ನಗರದ ವಿದ್ಯಾ ನಗರದ ಬಯಲು ರಂಗಮಂದಿರದ ಗಣೇಶ ಫೆಂಡಲ್ ಆವರಣದಲ್ಲಿ 108 ಬಾರಿ ಸೂರ್ಯ ಸಮಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳಾದ ಡಾ.ಶಿವಕುಮಾರ್, ಪತಂಜಲಿ ಯೋಗ ಸಮಿತಿಯ ಸಂಘ ಹಾಗೂ ವಿದ್ಯಾನಗರ ಗ್ರಾಮ ಪಂಚಾಯಿತಿ ಸದಸ್ಯರು ಭಾಗವಹಿಸಲಿದ್ದಾರೆ.

## ತಾಮ್ರದ ಕೇಬಲ್ ಕಳ್ಳರ ಬಂಧನ: 11 ಲಕ್ಷದ ತಂತಿ ವಶ

» ಚಿತ್ರದುರ್ಗ

ತಾಮ್ರದ ವಿದ್ಯುತ್ ವಾಹಕ ಕೇಬಲ್ ಕಳವು ಮಾಡುತ್ತಿದ್ದ ಗ್ಯಾಂಗ್ ಅನ್ನು ಪೊಲೀಸರು ಬಂಧಿಸಿದ್ದಾರೆ.

ಹೊಳಲ್ಕೆರೆ ತಾಲ್ಲೂಕಿನ ಕೆ.ಗುರುಮೂರ್ತಿ ,ಕೆ.ಸಂತೋಷ್, ಸಣ್ಣಕೆಂಚಪ್ಪ, ಕೆ.ಎಸ್. ರಾಘವೇಂದ್ರ, ಜೆ. ವೆಂಕಟೇಶ್, ಡಿ. ರಾಜು ಬಂಧಿತರು. ಆರೋಪಿಗಳಾದ ಕೃಷ್ಣ, ಚಂದ್ರು ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ಹೊಳಲ್ಕೆರೆ ತಾಲ್ಲೂಕಿನ ತೇಕಲವಟ್ಟಿ ಗ್ರಾಮದ ಬಳಿಯ ವಿಂಡ್ ವರ್ಲ್ಡ್ ಲಿಮಿಟೆಡ್ ಕಂಪನಿಯ8 ಪವನ ವಿದ್ಯುತ್ ಕೇಂದ್ರಗಳಿಗೆ ಅಳವಡಿಸಿರುವ 700 ಮೀಟರ್ ತಾಮ್ರದ ವಿದ್ಯುತ್ ವಾಹಕ ಕೇಬಲ್‌ಗಳನ್ನು ಕಳವು ಮಾಡಿದ್ದಾರೆ ಎಂದು ಕಂಪೆನಿಯ ಆಡಳಿತ ವ್ಯವಸ್ಥಾಪಕ ನವೀನ್ ಕುಮಾರ್ 2023ರ ಅಕ್ಟೋಬರ್ 8 ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು.ಪ್ರಕರಣದ ತನಿಖೆ ಪ್ರಾರಂಭಿಸಿದ ಸಿಪಿಐ ಎಂ.ಬಿ ಚಿಕ್ಕಣ್ಣನವರ್, ಪಿಎಸ್‌ಐ



ಕಾಂತರಾಜು, ಆರ್.ಡಿ.ರಮೇಶ್ ಕುಮಾರ, ರುದ್ರೇಶ್, ತಿಮ್ಮಣ್ಣ, ಸನಾವುಲ್ಲಾ. ರವಿಕುಮಾರ, ಕುಬೇರಪ್ಪ, ನೂರ್ ಅಹಮದ್ ನದಾಫ್, ಸಿದ್ದನಗೌಡ ಅವರ ತಂಡ ಆರು ಆರೋಪಿಗಳನ್ನು ಬಂಧಿಸಿದೆ. ಬಂಧಿತರಿಂದ ▯ 11,92,175 ಬೆಲೆ ಬಾಳುವ ತಾಮ್ರದ ತಂತಿ ಮತ್ತು ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಗಳು ತೇಕಲವಟ್ಟಿ ಗ್ರಾಮದ ಗುಡ್ಡದ ಮೇಲಿರುವ ವಿಂಡ್ ಫ್ಯಾ▯▯ಗಳಲ್ಲಿ ಅಳವಡಿಸಿರುವ ತಾಮ್ರದ ವಿದ್ಯುತ್ ಕೇಬ▯▯ಗಳನ್ನು ತುಂಡರಿಸಿ ಬೈ▯▯ಗಳ ಸಹಾಯದಿಂದ ಗುಡ್ಡದಿಂದ ಕೆಳಗೆ ತಂದು ಲಗೇಜ್ ವಾಹನದಲ್ಲಿ ಜಗಳೂರು ಹಾಗೂ ಹಿರಿಯೂರಿನ ಗುಜರಿ ಅಂಗಡಿ ಮಾರಾಟ ಮಾಡಿದ್ದರು.

## ಪ್ಲಾಸ್ಟಿಕ್ ಬಳಕೆ ಕಮ್ಮಿ ಮಾಡಿ ಬಟ್ಟೆ ಚೀಲಗಳನ್ನು ಬಳಸಿ



» ಚಿತ್ರದುರ್ಗ

ಏಕ ಬಳಕೆ ಪ್ಲಾಸ್ಟಿಕ್ ನಿಷೇಧ, ಕಸ ವಿಲೇವಾರಿ, ಸ್ವಚ್ಚತೆ, ಕನ್ನಡ ನಾಮಫಲಕ ಅಳವಡಿಸುವುದು, ಉದ್ದಿಮೆ ಪರವಾನಗಿ ಪಡೆಯುವುದು ಕುರಿತಂತೆ ಉದ್ದಿಮೆದಾರರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ನಗರಸಭೆಯಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿತ್ತು.ನಗರಸಭೆ ಪೌರಾಯುಕ್ತರಾದ ಎಂ.ರೇಣುಕಾ ಉದ್ದಿಮೆದಾ ರರನ್ನು ಕುರಿತು ಮಾತನಾಡುತ್ತ ಕಸವನ್ನು ಎಲ್ಲೆಂದರಲ್ಲಿ ಎಸೆಯಬೇಡಿ. ಪ್ಲಾಸ್ಟಿಕ್ ಬಳಕೆ ಕಮ್ಮಿ ಮಾಡಿ ಬಟ್ಟೆ ಚೀಲಗಳನ್ನು ಬಳಸಿ. ಏಕೆಂದರೆ ಪ್ಲಾಸ್ಟಿಕ್ ಮಣ್ಣಿನಲ್ಲಿ ಕೊಳೆಯವುದಿಲ್ಲ.


ಪುಟ ↘ 2


**ಪ್ರಮುಖ ಸುದ್ದಿ**

# ಹೊರಗುತ್ತಿಗೆ ಪೌರಕಾರ್ಮಿಕರಿಂದ ಬೆಂಗಳೂರು ಚಲೋ

» ಚಳ್ಳಕೆರೆ

ಇಲ್ಲಿನ ನಗರಸಭೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರು ವೇತನ ನೇರಪಾವತಿ ಸೇರಿದಂತೆ ತಮ್ಮ ಎಲ್ಲಾ ಪ್ರಮುಖ ನಾಲ್ಕೂ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ನಗರಸಭೆ ಕಚೇರಿ ಮುಂದೆ ಪ್ರತಿಭಟನೆ ನಡೆಸುತ್ತಿದ್ದು, ಫೆ.15ರ ಗುರುವಾರ ಮುಖ್ಯಮಂತ್ರಿಗಳನ್ನು ಭೇಟಿ ಮಾಡುವುದಾಗಿ ನೌಕರರ ಸಂಘದ ಅಧ್ಯಕ್ಷ ಶ್ರೀನಿವಾಸ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಹೊರಗುತ್ತಿಗೆದಾರರ ರಾಜ್ಯಾಧ್ಯಕ್ಷ ಎಂ.ಬಿ.ನಾಗಣ್ಣಗೌಡಮಾರ್ಗದರ್ಶನದಂತೆ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 65ಕ್ಕೂ ಹೆಚ್ಚು ಜನರು ತಮ್ಮ ಬೇಡಿಕೆಗಳ ಈಡೇರಿಕೆಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲಿದ್ದಾರೆ. ಪ್ರತಿತಿಂಗಳು



ಹೊರಗುತ್ತಿಗೆದಾರರು ಎಲ್ಲಾ ರೀತಿಯ ಕೆಲಸ ಕಾರ್ಯಗಳನ್ನು ಪ್ರಾಮಾಣಿಕವಾಗಿನಿರ್ವಹಿಸಿದರೂ ಸಹ ವೇತನ ನೀಡುವಲ್ಲಿ ವಿಳಂಬವಾಗುತ್ತಿದೆ. ಹೊರಗುತ್ತಿಗೆ ಪೌರಕಾರ್ಮಿಕರಿಗೆ ಯಾವುದೇ ಸಾಮಾಜಿಕ ಭದ್ರತೆ ಇಲ್ಲ. ಅಧಿಕಾರಿ ವರ್ಗವಂತು ನಮ್ಮ ಭೇಡಿಕೆಗಳ ಬಗ್ಗೆ ಸಕರಾತ್ಮಕವಾಗಿ ಸ್ಪಂದಿಸುತ್ತಿಲ್ಲ. ಆದ್ದರಿಂದ ಮುಖ್ಯಮಂತ್ರಿಗಳನ್ನು ಭೇಟಿ ಮಾಡುವುದಾಗಿ ತಿಳಿಸಿದರು.

ಪ್ರತಿಭಟನಾನಿರತ ಹೊರಗುತ್ತಿಗೆ ಪೌರಕಾರ್ಮಿಕರನ್ನು ಭೇಟಿ ಮಾಡಿದ ನಗರಸಭಾ ಸದಸ್ಯ ಕೆ.ವೀರಭದ್ರಪ್ಪ, ಎಂ.ಜೆ.ರಾಘವೇಂದ್ರ, ಸಾಮಾಜಿಕ ಹೋರಾಟಗಾರರಾದ ಆರ್.ಪ್ರಸನ್ನಕುಮಾರ್, ಉಮೇಶ್‌ಚಂದ್ರಬ್ಯಾನರ್ಜಿ, ಎಚ್. ಎಸ್.ಸೈಯದ್ ಮುಂತಾದವರು ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ, ಸರ್ಕಾರ ಇವರ ಎಲ್ಲಾ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕೆಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಕಾರ್ಯದರ್ಶಿ ಬಿ.ಮಂಜುನಾಥ, ಉಪಾಧ್ಯಕ್ಷ ಕೆ.ಪೆನ್ನೇಶ್, ಬಿ.ಪಾಪಣ್ಣ, ಆರ್.ನಾಗರಾಜ, ಎಚ್. ಉಮೇಶ್, ದೇವರಾಜ, ಬಸವರಾಜ, ಸೋಮಶೇಖರ್, ಎಸ್.ಪವನ್, ಯೋಗೇಶ್, ಮಂಜುನಾಥಬೆಳಗೆರೆ ಮುಂತಾದವರು ಭಾಗವಹಿಸಿದ್ದರು.





## ಫಾಸ್ಟ್ ನ್ಯೂಸ್

### ಪ್ಲಾಸ್ಟಿಕ್ ಬಳಕೆ ಕಮ್ಮಿ ಮಾಡಿ ಬಟ್ಟೆ ಚೀಲಗಳನ್ನು ಬಳಸಿ

» ಮೊದಲ ಪುಟದಿಂದ

ಇದರಿಂದಪರಿಸರಕ್ಕೆಹಾನಿಯಾಗುತ್ತದೆ.ದಿನನಿತ್ಯವೂ ನಿಮ್ಮ ಮನೆ ಬಾಗಿಲು ಹಾಗೂ ಅಂಗಡಿಗಳ ಬಳಿ ಬರುವ ನಗರಸಭೆ ವಾಹನಗಳಲ್ಲಿ ಕಸ ಹಾಕಿ ಸ್ವಚ್ಚತೆ ಕಾಪಾಡಿ ಎಂದು ಮನವಿ ಮಾಡಿದರು. ಉದ್ದಿಮೆದಾರರು ಕಡ್ಡಾ ಯವಾಗಿ ಪರವಾನಗಿ ಪಡೆದುಕೊಳ್ಳಬೇಕು. ಇಲ್ಲವಾದಲ್ಲಿ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.ಪರಿಸರ ಇಂಜಿನಿಯರ್ ಜಾಫರ್, ಹೆಲ್ತ್ಇನ್ಸ್‌ಪೆಕ್ಟರ್‌ಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

### ಬಾರ್ ಅಂಡ್ ರೆಸ್ಟೋರೆಂಟ್ ಕಿರಾಣಿ ಅಂಗಡಿಗಳ ಮೇಲೆ ನಗರಸಭೆ ಧಾಳಿ: ನಿಷೇಧಿತ ಪ್ಲಾಸ್ಟಿಕ್ ವಶ



» ಚಿತ್ರದುರ್ಗ

ನಗರದಲ್ಲಿ ಕೆಲವು ಬಾರ್ ಅಂಡ್ ರೆಸ್ಟೋರೆಂಟ್, ಕಿರಾಣಿ ಅಂಗಡಿಗಳ ಮೇಲೆ ನಗರಸಭೆಯವರು ಧಾಳಿ ನಡೆಸಿ ನೂರು ಕೆ.ಜಿ. ಪ್ಲಾಸ್ಟಿಕ್ ವಶಪಡಿಸಿಕೊಂಡು ಹದಿನಾಲ್ಕು ಸಾವಿರದ ಆರು ನೂರು ರೂ.ಗಳ ದಂಡ ವಿಧಿಸಿದ್ದಾರೆ.

ನಗರಸಭೆ ಪೌರಾಯುಕ್ತರಾದ ಎಂ.ರೇಣುಕಾ, ವ್ಯವಸ್ಥಾಪಕಿ ಬಿ.ಮಂಜುಳ, ಪರಿಸರ ಇಂಜಿನಿಯರ್ ಜಾಫರ್, ರೇಣುಕ, ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ಸರಳ, ಭಾರತಿ, ನಿರ್ಮಲ, ನಾಗರಾಜ್, ಬಸವರಾಜ್ ಇವರುಗಳು ಧಾಳಿ ನಡೆಸಿದರು.

### ಲೋಕಸಭೆ ಚುನಾವಣೆ: 17 ರಂದು ಜೆಡಿಎಸ್ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿಜಾತ್ಯಾತೀತಜನತಾದಳದವತಿಯಿಂದ ಫೆ. 17 ರ ಶನಿವಾರ ಬೆಳಿಗ್ಗೆ 11 ಗಂಟೆಗೆ ಪೂರ್ವಬಾವಿ ಸಭೆಯನ್ನು ನಗರದ ನೀಲಕಂಠೇಶ್ವರ ದೇವಾಲಯದ ಪಕ್ಕದಲ್ಲಿನ ಜಿಲ್ಲಾ ಜಾತ್ಯಾತೀತ ಜನತಾದಳ ಕಚೇರಿಯಲ್ಲಿ ಕರೆಯಲಾಗಿದೆ ಎಂದು ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ್ ತಿಳಿಸಿದ್ದಾರೆ. ಈ ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಜಾತ್ಯಾತೀತ ಜನತಾದಳದ ಜಿಲ್ಲಾಧ್ಯಕ್ಷರಾದ ಎಂ.ಜಯ್ಯಣ್ಣರವರು ವಹಿಸಲಿ ದ್ದಾರೆ. ಚಿತ್ರದುರ್ಗ ಲೋಕಸಭಾ ಉಸ್ತುವಾರಿಗಳಾದ ಮಾಜಿ ಶಾಸಕರಾದ ತಿಮ್ಮರಾಯಪ್ಪ, ಚಳ್ಳಕೆರೆ ವಿಧಾನಸಭೆ ಪರಾಜಿತ ಅಭ್ಯರ್ಥಿ ರವೀಶ್, ಹಿರಿಯೂರು ವಿಧಾನಸಭೆ ಪರಾಜಿತ ಅಭ್ಯರ್ಥಿ ರವೀಂದ್ರಪ್ಪ ಭಾಗವಹಿಸಲಿದ್ದಾರೆ. ಜೆಡಿಎಸ್‌ನ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್, ಮಾಜಿ ಅಧ್ಯಕ್ಷ ಯಶೋಧರ, ಕಾರ್ಯಾಧ್ಯಕ್ಷರಾದ ಜಿ.ಬಿ.ಶೇಖರ್, ಮಠದಹಟ್ಟಿ ಈರಣ್ಣ, ಸೇರಿದಂತೆ ಜೆಡಿಎಸ್‌ನ ತಾಲ್ಲೂಕು ಮತ್ತು ವಿವಿಧ ಘಟಕದ ಆಧ್ಯಕ್ಷರು ಪದಾಧಿಕಾರಿಗಳು ಸಲಹೆ, ಸೂಚನೆಯನ್ನು ನೀಡಬೇಕೆಂದು ಮನವಿ ಮಾಡಿದ್ದಾರೆ.

### ಅಹಿಂದ ಕರ್ನಾಟಕ ರಾಜ್ಯ ಹಿರಿಯ ಉಪಾಧ್ಯಕ್ಷರಾಗಿ ನೇಮಕ



» ದಾವಣಗೆರೆ

ಹಿರಿಯ ಪತ್ರಕರ್ತಡಾ.ಬಿ.ವಾಸುದೇವಅವರನ್ನುಅ ಹಿಂದಕರ್ನಾಟಕರಾಜ್ಯ ಹಿರಿಯಉಪಾಧ್ಯಕ್ಷರಾಗಿ ನೇಮಕ ಮಾಡಿಅಹಿಂದಕರ್ನಾಟಕರಾಜ್ಯಅಧ್ಯಕ್ಷ ಪ್ರಭುಲಿಂಗದೊಡ್ಡಿನಿ ಆದೇಶ ನೀಡಿದ್ದಾರೆ.

ಎರಡನೇ ಹಂತದಅಹಿಂದ ನಾಯಕರನ್ನು ಸಾಮಾಜಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಸದೃಢ ಮತ್ತು ಬಲಿಷ್ಠ ಮಾಡಲು ಮುಂಬರುವ ದಿನಗಳಲ್ಲಿ ಶಿಕ್ಷಣ ಸಂಸ್ಥೆ ಮತ್ತು ಬ್ಯಾಂಕುಗಳು ಉದ್ಯಮಗಳನ್ನು ಸ್ಥಾಪಿಸುವ ಗುರಿಯನ್ನು ಈ ಸಂಘಟನೆ ಹ ೊಂದಿದೆಎಂದುಅಹಿಂದಕರ್ನಾಟಕರಾಜ್ಯಅಧ್ಯಕ್ಷಪ ್ರಭುಲಿಂಗದೊಡ್ಡಿನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ವೇಳೆ ಅಹಿಂದಕರ್ನಾಟಕರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೊ. ಬೀರಲಿಂಗೇಶ್ವರ ಪೂಜಾರಿ, ಅಹಿಂದಕರ್ನಾಟಕರಾಜ್ಯಕಾರ್ಯಧ್ಯಕ್ಷ ಸಿ ಎಂ ಕರಡಿಕೊಪ್ಪ ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾಗೆ ಅಭೂತಪೂರ್ವ ಸ್ಪಂದನೆ: ಡಿಸಿ ವೆಂಕಟೇಶ್

» ಚಿತ್ರದುರ್ಗ

ಸಂವಿಧಾನದ ಆಶಯ ಮತ್ತು ಮೌಲ್ಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ರಾಜ್ಯ ಸರ್ಕಾರದ ವತಿಯಿಂದ "ಸಂವಿಧಾನ ಜಾಗೃತಿ ಜಾಥಾ"ವನ್ನು ಹಮ್ಮಿಕೊಂಡಿದ್ದು, ಜಿಲ್ಲೆಯ ಎಲ್ಲೆಡೆ ಜಾಥಾಕ್ಕೆ ಸಾರ್ವಜನಿಕ ವಲಯದಲ್ಲಿ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಸಂಚರಿಸುತ್ತಿರುವ "ಸಂವಿಧಾನ ಜಾಗೃತಿ ಜಾಥಾ" ಕುರಿತು, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಅಧಿಕಾರಿಗಳೊಂದಿಗೆ ಕೈಗೊಂಡ ಸಭೆಯಲ್ಲಿ ಮಾಹಿತಿ ಪಡೆದು, ಬಳಿಕ ಮಾತನಾಡಿದ ಅವರು, ಭಾರತದ ಸಂವಿಧಾನ ಅಂಗೀಕಾರಗೊಂಡ 75ನೇ ವರ್ಷದ ಆಚರಣೆಯ ಪ್ರಯುಕ್ತ ಜ.26 ರ ಗಣರಾಜ್ಯೋತ್ಸವ ದಿನದಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು "ಸಂವಿಧಾನ ಜಾಗೃತಿ ಜಾಥಾ" ಕ್ಕೆ ಚಾಲನೆ ನೀಡಿದ್ದರು. ಎಲ್‌ಇಡಿ ವಾಹನದೊಂದಿಗೆ, ಬುದ್ಧ, ಬಸವ, ಅಂಬೇಡ್ಕರ್ ಪುತ್ಥಳಿಯನ್ನು ಒಳಗೊಂಡಿರುವ ವಿಶೇಷ ವಾಹನದ ಜಾಥಾ ಮೂಲಕ ಜಿಲ್ಲೆಯ ಪ್ರತಿಯೊಂದು ನಗರ, ಪಟ್ಟಣ ಮತ್ತು ಗ್ರಾಮಗಳಲ್ಲಿ ಸಂಚರಿಸಿ ಸಂವಿಧಾನದ ಮಹತ್ವ ಕುರಿತು ಅರಿವು ಮೂಡಿಸುವ ಕಾರ್ಯ ನಡೆಯುತ್ತಿದೆ ಎಂದರು.ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಪ್ರದರ್ಶಿಸುವ ಎಲ್‌ಇಡಿ ಪರದೆ ಹೊಂದಿರುವ ಸ್ತಬ್ಧಚಿತ್ರವು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಫೆ.23 ರವರೆಗೆ ಸಂಚರಿಸಲಿದೆ.



ಸಂವಿಧಾನಜಾಗೃತಿಜಾಥಾಕಾರ್ಯಕ್ರಮವು ಪೂರ್ವ ನಿಗದಿತ ಮಾರ್ಗದಲ್ಲಿ ಪ್ರತೀ ದಿನ ಸಂಚರಿಸುತ್ತಿದೆ. ಜಾಥಾ ಕಳೆದೆರಡು ದಿನಗಳಿಂದ ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳಲ್ಲಿ ವಿವಿಧ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಎಲ್ಲೆಡೆ ಪೂರ್ಣ ಕುಂಬ ಹೊತ್ತ ಮಹಿಳೆಯರು ಸ್ಥಬ್ಧಚಿತ್ರ ಮೆರವಣಿಗೆಯಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳುತ್ತಿದ್ದಾರೆ. ವಿಶೇಷ ಬೈಕ್ ರ್‍ಯಾಲಿಗಳನ್ನುಕೂಡಆಯೋಜಿಸಲಾಗುತ್ತಿದೆ. ಪ್ರತಿ ಗ್ರಾಮಗಳಲ್ಲಿಯೂ ಆಕರ್ಷಕ ಸಂವಿಧಾನ ಜಾಗೃತಿಸ್ಥಬ್ಧಚಿತ್ರ ಜನರ ಮನಸ್ಸನ್ನು ಗೆಲ್ಲುವುದರೊಂದಿಗೆ ಸಂವಿಧಾನ ಮಹತ್ವ ಸಾರುತ್ತಿದೆ. ಸ್ಥಬ್ಧಚಿತ್ರ ಸಾಗುವ ಕಡೆಯಲ್ಲೆಲ್ಲಾ ಜನಸ್ಪಂದನೆ ಅಭೂತ ಪೂರ್ವವಾಗಿದೆ. ಜಾಗೃತಿ ಜಾಥಾ ಸಂದರ್ಭದಲ್ಲಿಯೇ ಗ್ರಾಮ, ಪಟ್ಟಣಗಳಲ್ಲಿ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸುವ ಕಾರ್ಯ ವಿಶೇಷವಾಗಿ ಜರುಗುತ್ತಿದೆ. ಸಂವಿಧಾನ ಜಾಗೃತಿ ಜಾಥಾ ಸಾಗುವ ಮಾರ್ಗಗಳಲ್ಲಿ ಸಾರ್ವಜನಿಕರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸಂವಿಧಾನದ ಮಹತ್ವ ಅರಿಯುವಂತಾಗಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಅವರು ಆಶಯ ವ್ಯಕ್ತಪಡಿಸಿದರು.

ಹೊಸದುರ್ಗ ತಾಲ್ಲೂಕಿನಲ್ಲಿ ಜಾಥಾ : ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅವರು ಮಾಹಿತಿ ನೀಡಿ, ಬುಧವಾರದಂದು ಹೊಸದುರ್ಗ ತಾಲ್ಲೂಕಿನ ಮಲ್ಲಪ್ಪನಹಳ್ಳಿ, ಆನಿವಾಳ, ಬಾಗೂರು, ಸಾಣೆಹಳ್ಳಿ, ಬೋಕಿಕೆರೆ, ಹೊಸದುರ್ಗ ಕಸಬಾ, ಕೆಲ್ಲೋಡು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂವಿಧಾನ ಜಾಗೃತಿ ಜಾಥಾ ಸಂಚರಿಸಿದ್ದು, ಎಲ್ಲೆಡೆ ಅಭೂತಪೂರ್ವ ಸ್ವಾಗತ ದೊರೆತಿದೆ. ವಿದ್ಯಾರ್ಥಿಗಳು ಆಸಕ್ತಿಯಿಂದ ಜಾಥಾದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಸಾಣೆಹಳ್ಳಿಯಲ್ಲಿ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ಏರ್ಪಡಿಸಿದ ಕಾರ್ಯಕ್ರಮದಲ್ಲಿ, ಸ್ವಾಮೀಜಿಗಳು ಸಂವಿಧಾನದ ಆಶಯ ಹಾಗೂ ಸಂವಿಧಾನದ ಮಹತ್ವ ಕುರಿತು ಹಿತ ನುಡಿಗಳನ್ನಾಡಿದರು ಎಂದರು.

ಫೆ. 15 ರಂದು ವಿವಿಧೆಡೆ ಜಾಥಾ : ಸಂವಿಧಾನ ಜಾಗೃತಿ ಜಾಥಾ ಇದೇ ಫೆ. 15 ರಂದು ಹೊಸದುರ್ಗ ತಾಲ್ಲೂಕಿನ ಕಂಗುವಳ್ಳಿ, ಬಲ್ಲಾಳಸಮುದ್ರ, ಕಬ್ಬಳ, ಬೆಲಗೂರು, ಹೆಗ್ಗೆರೆ, ಕುರುಬರಹಳ್ಳಿ ಮತ್ತು ತಂಡಗ ಗ್ರಾಮಗಳಲ್ಲಿ ಸಂಚರಿಸಿ, ಸಾರ್ವಜನಿಕರಲ್ಲಿ ಸಂವಿಧಾನದ ಮಹತ್ವ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಜರುಗಲಿದೆ.

## ಕರಿಯಮ್ಮದೇವಿ ದೇವಸ್ಥಾನದ ಪ್ರಾರಂಭೋತ್ಸವ

» ಚಿತ್ರದುರ್ಗ

ಸುಂದರವಾದ ದೇವಸ್ಥಾನ ಕಟ್ಟಿರುವಂತೆ ಬದುಕನ್ನು ಸುಂದರವಾಗಿರಿಸಿಕೊಳ್ಳಿ ಎಂದು ಮುರುಘಾಮಠದ ಉಸ್ತುವಾರಿ ಬಸವಪ್ರಭು ಸ್ವಾಮೀಜಿ ತಿಳಿಸಿದರು.

ಹೊಳಲ್ಕೆರೆ ತಾಲ್ಲೂಕಿನ ನಂದನಹೊಸೂರು ಗ್ರಾಮದಲ್ಲಿ ಕರಿಯಮ್ಮದೇವಿ ದೇವಸ್ಥಾನ ಪ್ರಾರಂಭೋತ್ಸವ, ನೂತನ ವಿಗ್ರಹ ಪ್ರತಿಷ್ಠಾಪನೆ, ಗೋಪುರ ಕಳಸಾರೋಹಣ ಪ್ರತಿಷ್ಠಾಪನೆ ಸಮಾರಂಭದ ಅಧ್ಯಕ್ಷತೆ ವಹಿಸಿ ಆಶೀರ್ವಚನ ನೀಡಿದರು.

ಮುರುಘಾಮಠಕ್ಕೂ ನಂದನಹೊಸೂರಿಗೆ ಅವಿನಾಭಾವ ಸಂಬಂಧವಿದೆ. ಮಠದ ಭಕ್ತರು ಎಲ್ಲಿ ಸಿಗುತ್ತಾರೆಂದರೆ ಅದು ನಂದನಹೊಸೂರಿನಲ್ಲಿ ಎಂದು ಹೇಳಿಕೊಳ್ಳಲು ಖುಷಿಯಾಗುತ್ತದೆ. ಮುರುಘಾಮಠದ ಕಾರ್ಯಕ್ರಮ ನಡೆಸಿಕೊಟ್ಟ ಕೀರ್ತಿ ನಂದನಹೊಸೂರಿಗೆ ಸಲ್ಲುತ್ತದೆ. ಮುರುಗೇಶನ ಭಕ್ತರು ಈ ಗ್ರಾಮದಲ್ಲಿದ್ದಾರೆ. ಭಕ್ತಿಯ ಸಾಮ್ರಾಜ್ಯವಿದೆ. ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಸೇರಿದ್ದಾರೆ. ಎಲ್ಲಾ ಜನಾಂಗದವರು ಇಲ್ಲಿ ಪ್ರೀತಿ, ಸಹಬಾಳ್ವೆ, ಸಹೋದರತೆ, ಸಮಾನತೆಯಿಂದ ಬದುಕುತ್ತಿದ್ದಾರೆ. ಒಳ್ಳೆಯದು ಮಾಡುವಾಗ ನಿಂದನೆ ಇದ್ದೆ ಇರುತ್ತದೆ. ಅದಕ್ಕೆ ತಲೆ ಕೆಡಿಸಿಕೊಳ್ಳಬಾರದು. ಭಾರತ ಸರ್ವ ಜನಾಂಗದ ಶಾಂತಿಯ ತೋಟ ಎನ್ನುವಂತೆ ನಂದನಹೊಸೂರುಗ್ರಾಮಕೂಡಸರ್ವಜನಾಂಗದ ಶಾಂತಿಯ ತೋಟವಿದ್ದಂತೆ ಎಂದು ಹೇಳಿದರು. ಹೊಸದುರ್ಗ ಕುಂಚಿಟಿಗ ಮಹಾಸಂಸ್ಥಾನ ಮಠದ ಡಾ.ಶಾಂತವೀರಸ್ವಾಮೀಜಿ ಮಾತನಾಡಿ ಊರಿಗೊಂದು ದೇವಸ್ಥಾನವಿರಬೇಕು. ಆದರೆ ಕೇರಿಗೊಂದು, ಓಣಿಗೊಂದು, ಜಾತಿಗೊಂದು ಬೇಕಿಲ್ಲ. ದೇವಸ್ಥಾನಕ್ಕೆ ಕೊಟ್ಟ ಸಂಭ್ರಮ ಆಸಕ್ತಿಯನ್ನು ಮಕ್ಕಳ ಶಿಕ್ಷಣಕ್ಕೆ ಕೊಡದಿರುವುದು ದೊಡ್ಡ ದುರಂತ. ನಮ್ಮ ದೇಶದ ಆಚಾರ, ವಿಚಾರ, ಸಂಸ್ಕೃತಿಯನ್ನು ಬಿಟ್ಟುಕೊಡಬಾರದು. ನಾಗರೀಕ ಪ್ರಪಂಚದ ನಾಗಾಲೋಟದಲ್ಲಿ ಬದುಕಿಗೆ ಭದ್ರತೆ ಇಲ್ಲದಂತಾಗಿದೆ.ಯಾವುದೇಮನೆಗೆಬಂದಹೆಣ್ಣನ್ನು ಮಗಳಂತೆ ಕಂಡಾಗ ಯಾವ ಮನೆಯಲ್ಲಿಯೂ ಜಗಳವಿರುವುದಿಲ್ಲ. ಅತ್ತೆ ಸೊಸೆ ಹೊಂದಿಕೊಂಡು ಹೋಗಬೇಕು ಎಂದು ಮಹಿಳೆಯರಿಗೆ ಕರೆ ನೀಡಿದರು.ಸ್ನಾನ ಮಾಡಿದಾಗ ಮನಸ್ಸಿಗೆ ಹೇಗೆ ಉಲ್ಲಾಸವಾಗುತ್ತದೋ ಅದೇ ರೀತಿ ದುಶ್ಚಟ, ದುರಾಲೋಚನೆಗಳನ್ನು ತ್ಯಜಿಸಿದಾಗ ಮನಸ್ಸು, ಆರೋಗ್ಯ ಚೆನ್ನಾಗಿರುತ್ತದೆ. ಡಚ್ಚರು, ಪೋರ್ಚುಗೀಸರು, ಮಹಮದ್ ಗಝ್ನಿ ಇವರುಗಳೆಲ್ಲಾ ಭಾರತದ ಮೇಲೆ ದಂಡೆತ್ತಿ ಬಂದು ಸಂಪತ್ತನ್ನೆಲ್ಲಾ ದೋಚಿದ್ದಾರೆ.



ನಮ್ಮ ದೇಶದ ಸಂಸ್ಕೃತಿ, ಆಚಾರ, ವಿಚಾರಗಳನ್ನು ಲೂಟಿ ಹೊಡೆಯಲು ಅವರಿಂದ ಆಗಲಿಲ್ಲ. ಅದಕ್ಕಾಗಿ ಭಾರತದ ಸಂಸ್ಕೃತಿ ಉಳಿಯಬೇಕಾದರೆ ಗುರು-ಹಿರಿಯರನ್ನು ಗೌರವಿಸುವುದನ್ನು ಮಕ್ಕಳಿಗೆ ಚಿಕ್ಕಂದಿನಿಂದಲೆ ಹೇಳಿಕೊಡಬೇಕು ಎಂದರು.

ಬಿಜೆಪಿ.ಯುವ ಮುಖಂಡ ಎಂ.ಸಿ.ರಘುಚಂದನ್ ಮಾತನಾಡಿ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ.ಗೆ ಅತಿ ಹೆಚ್ಚಿನ ಬಹುಮತ ನೀಡಿರುವುದು ನಂದನಹೊಸೂರು ಎಂದು ಹೇಳಿಕೊಳ್ಳಲು ಖುಷಿಯಾಗುತ್ತದೆ. ಬಿಜೆಪಿ. ಭಾವುಟವೇ ಹಾರದ ಕಾಲದಲ್ಲಿ ಇಲ್ಲಿ ಪಕ್ಷದ ಭಾವುಟವನ್ನು ಹಾರಿಸಿದ್ದೀರಿ. ನಮ್ಮ ತಂದೆ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪನವರು ಕ್ಷೇತ್ರಾದ್ಯಂತ 174 ದೇವಸ್ಥಾನಗಳಿಗೆ ಹಣ ನೀಡಿದ್ದಾರೆ. ಅವರ ಬಳಿ ಮಾತನಾಡಿ ದೇವಸ್ಥಾನಕ್ಕೆ ಕಮಾನು ನಿರ್ಮಿಸಿಕೊಡುವುದಾಗಿ ಭರವಸೆ ನೀಡಿದರು.

ಕಾಂಗ್ರೆಸ್ ಅಲೆಯಲ್ಲಿ ಬಿಜೆಪಿ.ಗೆದ್ದಿದೆ ಎಂದರೆ ಅದಕ್ಕೆ ದೈವಬಲ, ಮತದಾರರು, ಕಾರ್ಯಕರ್ತರ ಪರಿಶ್ರಮವಿದೆ. ಗ್ಯಾರೆಂಟಿಗಳಿಂದ ರಾಜ್ಯ ಸರ್ಕಾರ ದಿವಾಳಿಯಾಗಿದೆ. ರಾಜ್ಯದಲ್ಲಿ ಎಲ್ಲಿಯೂ ಒಂದೆ ಒಂದು ಕಾಮಗಾರಿಗೆ ಗುದ್ದಲಿ ಹಾಕಿರುವುದನ್ನು ನೋಡಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವೈಫಲ್ಯತೆಯನ್ನು ಟೀಕಿಸಿದರು.ವಕೀಲ ಜಿ.ಹೆಚ್.ಶಿವಕುಮಾರ್, ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಮೂಡಲಗಿರಿಯಪ್ಪ, ಎನ್.ಎಸ್.ರಮೇಶ್, ಎಂ.ಪ್ರವೀಣ್ ಇವರುಗಳು ಮಾತನಾಡಿದರು.ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

## ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳಿಂದ ಪಾದಪೂಜೆ



» ಚಿತ್ರದುರ್ಗ

ನಗರದ ಪ್ರತಿಷ್ಠಿತ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ವಸಂತ ಪಂಚಮಿಯ ನಿಮಿತ್ತ ಬುಧವಾರ ಶಾರದ ಪೂಜೆ, ಸರಸ್ವತಿ ಪೂಜೆ ಹಾಗೂ ವಿದ್ಯಾರ್ಥಿಗಳಿಂದ ಪೋಷಕರಿಗೆ ಪಾದಪೂಜೆಯನ್ನು ಹಮ್ಮಿಕೊಳ್ಳಲಾಗಿತ್ತು. ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತ ಮಕ್ಕಳಿಂದ ಪೋಷಕರುಗಳಿಗೆ ಪಾದಪೂಜೆ ಮಾಡುವುದು ಭಾರತೀಯ ಸನಾತನ ಧರ್ಮದ ಧ್ಯೋತಕ. ಇದರಿಂದ ಮಕ್ಕಳಲ್ಲಿ ಚಿಕ್ಕಂದಿನಿಂದಲೇ ಗುರು-ಹಿರಿಯರನ್ನು ಗೌರವಿಸುವ ಸಂಸ್ಕೃತಿ, ಸಂಸ್ಕಾರ ಕಲಿಸಿದಂತಾಗುತ್ತದೆ. ಆಧುನಿಕ ಯುಗದಲ್ಲಿ ಭಾರತೀಯ ಸಂಸ್ಕೃತಿ ಕಡಿಮೆಯಾಗುತ್ತಿದ್ದು, ಪಾಶ್ಚಾತ್ಯ ಸಂಸ್ಕೃತಿ ವ್ಯಾಮೋಹಕ್ಕೆ ಎಲ್ಲರೂ ಒಳಗಾಗುತ್ತಿರುವುದು ವಿಷಾಧನೀಯ. ಹಾಗಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರಿಂದ ನಮ್ಮ ಸಂಸ್ಕೃತಿಯನ್ನು ಜೀವಂತವಾಗಿರಿಸಬಹುದು ಎಂದು ಹೇಳಿದರು.

ಎರಡು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಪೋಷಕರುಗಳಿಗೆ ಶ್ರದ್ಧಾ ಭಕ್ತಿಯಿಂದ ಪಾದಪೂಜೆ ನೆರವೇರಿಸಿದರು.

## ಪ್ರಮುಖ ಸುದ್ದಿ

# ಕೇಂದ್ರ ಸರ್ಕಾರದ ವಿರುದ್ಧ ರೈತರಿಂದ ಪಂಜಿನ ಮೆರವಣಿಗೆ

» ಚಿತ್ರದುರ್ಗ

ಭದ್ರಾಮೇಲ್ದಂಡೆ ಯೋಜನೆಗೆ ಕಾಯ್ದಿರಿಸಿರುವ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಬಿಡುಗಡೆಗೊಳಿಸದ ಕೇಂದ್ರ ಸರ್ಕಾರದ ವಿರುದ್ದ ರೈತರು ಮಂಗಳವಾರ ರಾತ್ರಿ ಗಾಂಧಿವೃತ್ತದಲ್ಲಿ ಪಂಜಿನ ಮೆರವಣಿಗೆ ನಡೆಸಿ ದೇಶದ ಪ್ರಧಾನಿ ಮೇಕಪ್ ಮೋದಿ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿರುವ ಕೇಂದ್ರ ಸರ್ಕಾರ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಬಿಡುಗಡೆಗೊಳಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವಿವಿಧ ಜನಪರ ಸಂಘಟನೆಗಳು ಕಳೆದ ಹದಿನಾಲ್ಕು ದಿನಗಳಿಂದಲೂ ಜಿಲ್ಲಾ ಪಂಚಾಯಿತಿ ಎದುರು ಧರಣಿ ನಡೆಸುತ್ತಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಗಮನ ಸೆಳೆಯುವುದಕ್ಕಾಗಿ ಮೆಜೆಸ್ಟಿಕ್ ವೃತ್ತದಿಂದ ಗಾಂಧಿವೃತ್ತದವರೆಗೂ ಪಂಜಿನ ಮೆರವಣಿಗೆ ನಡೆಸಿ ರೈತ ವಿರೋಧಿ ಸರ್ಕಾರಗಳ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.





ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಗಾಂಧಿವೃತ್ತದಲ್ಲಿ ಪಂಜಿನ ಮೆರವಣಿಗೆಯನ್ನುದ್ದೇಶಿಸಿ ಮಾತನಾಡುತ್ತ ಕಳೆದ 27 ವರ್ಷಗಳಿಂದಲೂ ಭದ್ರಾಮೇಲ್ದಂಡೆ ಯೋಜನೆಗಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಮ್ಮ ಮೇಲೆ ಸವಾರಿ ಮಾಡುತ್ತ ಬರುತ್ತಿವೆಯೇ ವಿನಃ ಹಣ ಮಾತ್ರ ಬಿಡುಗಡೆ ಮಾಡುತ್ತಿಲ್ಲ. ಮಳೆ ಬೆಳೆಯಿಲ್ಲದೆ ಬರಗಾಲಕ್ಕೆ ತುತ್ತಾಗಿರುವ ಚಿತ್ರದುರ್ಗ ಜಿಲ್ಲೆಗೆ ಭದ್ರೆ ನೀರು ಹರಿಯುವತನಕ ಧರಣಿಯಿಂದ ಹಿಂದೆ ಸರಿಯುವುದಿಲ್ಲವೆಂದು ಎಚ್ಚರಿಸಿದರು.

ಹೊಸದುರ್ಗ ತಾಲ್ಲೂಕು ರೈತ ಸಂಘದ ಅಧ್ಯಕ್ಷ ಬೋರೇಶ್, ಕಾರ್ಯದರ್ಶಿ ಶಶಿಧರ್, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಡಿ.ಎಸ್.ಹಳ್ಳಿ, ರೈತ ಮುಖಂಡರುಗಳಾದ ನಿರಂಜನ್, ಮೂಡಲಗಿರಿಯಪ್ಪ, ಈಶ್ವರಪ್ಪ, ಗಿರೀಶ್, ತಿಪ್ಪೇಸ್ವಾಮಿ, ಬಸವರಾಜ್, ಶಿವಣ್ಣ, ವಿಜಯ್, ನಾಗರಾಜ್‌ರೆಡ್ಡಿ, ವರದಪ್ಪ, ಚಿತ್ತಪ್ಪ ಇನ್ನು ಅನೇಕರು ಪಂಜಿನ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಪೊಲೀಸ್ ಪಬ್ಲಿಕ್ ಶಾಲೆ ಶಿಕ್ಷಕರ ನೇಮಕಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಹರಿಹರ ತಾಲ್ಲೂಕಿನ ಕೊಂಡಜ್ಜಿಯ ಪೊಲೀಸ್ ಪಬ್ಲಿಕ್ ಶಾಲೆಗೆ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಂಗ್ಲ ಭಾಷಾ, ವಿಜ್ಞಾನ, ಗಣಿತ ಸಹ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಎಂ.ಎ., ಎಂ.ಎಸ್ಸಿ,ಬಿ.ಇಡಿ, ಇದರೊಂದಿಗೆ 3 ವರ್ಷಗಳ ಅನುಭವಿರಬೇಕು, ಕಂಪ್ಯೂಟರ್ ಜ್ಞಾನ ರಚನಾತ್ಮಕ ಕೌಶಲ್ಯ ಹೊಂದಿರಬೇಕು. ಅರೆಕಾಲಿಕ ಶಿಕ್ಷಕರ ಹುದ್ದೆಗಳಾದ ಡ್ಯಾನ್ಸ್, ಕರಾಟೆ, ಅಬಾಕಸ್ ಹುದ್ದೆಗಳಿಗೆ 2 ವರ್ಷದ ಅನುಭವ, ಸಂಬಂಧಿಸಿದ ವಿಷಯದಲ್ಲಿ ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿಯನ್ನು ಫೆಬ್ರವರಿ ಅಂತ್ಯದೊಳಗೆ ಸಲ್ಲಿಸಬೇಕು. ಆಸಕ್ತರು ತಮ್ಮ ಸ್ವವಿವರವನ್ನು ವೆಬ್‌ಸೈಟ್ pprsdavanagere@ksp.gov.in ಸಲ್ಲಿಸಬಹುದು. ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 8277981961, 9743936234 ನ್ನು ಸಂಪರ್ಕಿಸಬಹುದೆಂದು ತಿಳಿಸಿದ್ದಾರೆ.

### 15ರಂದು ತಾಲ್ಲೂಕು ಮಟ್ಟದ ಗ್ರಾಮೀಣ ಕ್ರೀಡಾಕೂಟ ಉತ್ಸವ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಫೆ.15ರ ಗುರುವಾರ ಒಂದುದಿನದ ತಾಲ್ಲೂಕು ಮಟ್ಟದ ಗ್ರಾಮೀಣ ಕ್ರೀಡಾಕೂಟ ಉತ್ಸವ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಸುನೀಲ್‌ನಾಯ್ಕ, ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾ ಪಂಚಾಯಿತ್, ಯುವ ಸಬಲೀಕರಣ ಕ್ರೀಡಾ ಇಲಾಖೆ, ರಾಘವಾಂಕ ಶೈಕ್ಷಣಿಕ, ಕ್ರೀಡಾ, ಸಾಂಸ್ಕೃತಿಕ ಸಂಘದ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ತಾಲ್ಲೂಕು ಮಟ್ಟದ ಆಹ್ವಾನಿತ ಶಾಲೆಗಳು ಮಾತ್ರ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದ್ದು, ಹೆಚ್ಚಿನ ಮಾಹಿತಿಗೆ ಮೊ. 94810 40047 ಸಂಪರ್ಕಿಸಲು ಕೋರಿದೆ.

### ಆಟೋಚಾಲಕ ರವಿಕುಮಾರ್ ಆತ್ಮಹತ್ಯೆ

» ಚಳ್ಳಕೆರೆ

ಇಲ್ಲಿನ ಸೂಜಿಮಲ್ಲೇಶ್ವರ ನಗರ ವಾಸಿ ಆಟೋಚಾಲಕ ಕೆ.ರವಿಕುಮಾರ್(30) ಎಂಬ ವ್ಯಕ್ತಿ ತನಗೆ ದಿನನಿತ್ಯ ಕಿರುಕುಳ ನೀಡುತ್ತಿದ್ದ ಪೈಲ್ಸ್ ಕಾಯಿಲೆತಿಂದ ಬೇಸತ್ತು ಪಾವಗಡ ರಸ್ತೆಯ ಸಾಯಿಮಂದಿರ ಎದುರಿನ ಜಮೀನಿನ ಬದುವಿನ ಮರಕ್ಕೆ ನೇಣುಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮೃತನ ತಂದೆ ಕಾಟಪ್ಪನಹಟ್ಟಿಯ ಕಲ್ಲೇಶಪ್ಪ, ಪೊಲೀಸರಿಗೆ ನೀಡಿದ ದೂರಿನಲ್ಲಿ ನನ್ನ ಮಗ ಮೃತ ಕೆ.ರವಿಕುಮಾರ್ ವಿವಾಹಿತನಾಗಿದ್ದು ಮಕ್ಕಳೊಂದಿಗೆ ಬಾಡಿಗೆ ಮನೆಯಲ್ಲಿದ್ದ, ಪೈಲ್ಸ್ ಕಾಯಿಲೆ ಬಗ್ಗೆ ವಿವಿಧ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದರೂ ಗುಣಮುಖನಾಗಲಿಲ್ಲ. ಆದ್ದರಿಂದ ಬೇಸತ್ತು ಆತ್ಮಹತ್ಯೆಗೆ ಶರಣಾಗಿದ್ದಾನೆಂದು ತಿಳಿಸಿದ್ದಾನೆ. ಪಿಎಸ್‌ಐ ಧರಪ್ಪಬಾಳಪ್ಪ ದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ.

### ಫೆ.23ಕ್ಕೆ ಧೈರ್ಯಂ ಸರ್ವತ್ರ ಸಾಧನಂ ಚಲನಚಿತ್ರ ಬಿಡುಗಡೆ

» ದಾವಣಗೆರೆ

ಎಪಿ ಪ್ರೊಡಕ್ಷನ್ ಅಡಿ ನಿರ್ಮಾಣ ಮಾಡಿರುವ ಧೈರ್ಯಂ ಸರ್ವತ್ರ ಸಾಧನಂ ಚಲನಚಿತ್ರ ಫೆ.23 ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ ಎಂದು ಚಿತ್ರದ ನಾಯಕನಟ ಕೆ.ಕೆ.ವಿವಾನ್ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರ ನೈಜ ಘಟನೆ ಆಧಾರಿತವಾಗಿದ್ದು 1962ರಲ್ಲಿ ತುಮಕೂರು ಜಿಲ್ಲೆಯ ಕೊರಟಗೆರೆ ತಾಲೂಕಿನಲ್ಲಿ ನಡೆದ ಸತ್ಯ ಘಟನೆಯನ್ನು ಆಧರಿಸಿ ನಿರ್ಮಾಣ ಮಾಡಿದ್ದೇವೆ. ಈ ಘಟನೆ ನಡೆದ ವ್ಯಕ್ತಿಯ ಅನುಮತಿಯನ್ನು ಪಡೆದೇ ಚಿತ್ರ ನಿರ್ದೇಶಿಸಲಾಗಿದೆ ಎಂದರು. ಪೆನ್ನು ಮತ್ತು ಗನ್ನ್ ಆಧಾರಿತ ಚಿತ್ರ ಇದಾಗಿದೆ.ಚಿತ್ರದಲ್ಲಿ ಪೆನ್ನು ಎಂದರೆ ಶಿಕ್ಷಣ ಹಾಗೂ ಗನ್ ಎಂದರೆ ಧೈರ್ಯ ಎಂಬುದನ್ನು ತೋರಿಸಲಾಗಿದೆ. ಇದರೊಂದಿಗೆ ತಂದೆ ಮಗನ ಬಾಂಧವ್ಯ ಕುರಿತು ತೋರಿಸಲಾಗಿದೆ.ತಂದೆ ಮಗನ ಪ್ರೀತಿ ವಾತ್ಸಲ್ಯ ಹಾಗೂ ತಂದೆ ಯಾವ ರೀತಿ ತನ್ನ ಮಗನ ಯಶಸ್ಸಿಗೆ ಶ್ರಮಿಸುತ್ತಾನೆ ಎಂಬುದು ಮೂಡಿಬಂದಿದೆ ಎಂದರು. ತುಮಕೂರು ಹಾಗೂ ಶಿವಮೊಗ್ಗದ ಸುತ್ತಮುತ್ತಲ ಭಾಗದಲ್ಲಿ ಚಿತ್ರೀಕರಣ ಮಾಡಲಾಗಿದೆ ಚಿತ್ರದಲ್ಲಿ ಐದುಹಾಡುಗಳಿವೆ ಎಂದರು.ಸಿನಿಮಾ ಬಗ್ಗೆ ಜನರಿಗೆ ತೋರಿಸುವ ಉದ್ದೇಶದಿಂದ ಪ್ರಚಾರ ಹಮ್ಮಿಕೊಂಡಿದ್ದೇವೆ ಚಿತ್ರದುರ್ಗ, ದಾವಣಗೆರೆ, ಹಾವೇರಿ,ಹುಬ್ಬಳ್ಳಿ ಧಾರವಾಡ ಹಾಗೂ ಇತ್ತರ ಕರ್ನಾಟಕ ಭಾಗದಲ್ಲಿ ಪ್ರಚಾರ ಮಾಡುತ್ತಿದ್ದೇವೆ. ಜನರು ಹೊಸಬರ ಚಿತ್ರಕ್ಕೆ ಪ್ರೋತ್ಸಾಹ ನೀಡಬೇಕು ಎಂದರು. ಚಿತ್ರಕ್ಕೆ ಆನಂದ.ಜಿ ಬಾಬು ನಿರ್ಮಾಪಕರಾಗಿದ್ದು, ಎ.ಆರ್ ಸಾಯಿರಾಂ ನಿರ್ದೇಶಿಸಿದ್ದಾರೆ. ನಾಯಕಿಯಾಗಿ ಅನುಷಾ ರಾಯ್ ನಾಯಕಿಯಾಗಿದ್ದಾರೆ.ಫೆ.23 ರಂದು ರಾಜ್ಯಾದ್ಯಂತ ಚಿತ್ರ ಬಿಡುಗಡೆಯಾಗಲಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ರಾಮಾ ನಾಯಕ್ ಜೊಳ್ಳಿ,ಉಮಾ ಇದ್ದರು.

# ಡಾ.ಶಶಿಕುಮಾರ್‌ಗೆ 2023ರ ವರ್ಷದ ವ್ಯಕ್ತಿ ಪ್ರಶಸ್ತಿ

» ದಾವಣಗೆರೆ



ಇದೊಂದು ಭಾವುಕ ಕಾರ್ಯಕ್ರಮ. ಸಾಧನೆಯನ್ನು ಗುರ್ತಿಸಿ ಸನ್ಮಾನಿಸುವುದರಿಂದ ಅವರಿಗೆ ಇನ್ನಷ್ಟು ಉತ್ತೇಜನ ದೊರೆಯುವಂತಹ ಟಾನಿಕ್‌ನಂತಾಗುವುದು. ಸಾಧಕರಿಗೆ ಪ್ರೋತ್ಸಾಹದಾಯಕವೆನಿಸುತ್ತದೆ ಎಂದು ಡಾ.ಶಶಿಕುಮಾರ್ ವಿ.ಮೆಹರ್ವಾಡೆಯವರು ತಮ್ಮ ಮನದಾಳವನ್ನು ವ್ಯಕ್ತಪಡಿಸಿದರು.

ಜಿಲ್ಲೆ ಸಮಾಚಾರ ದಿನಪತ್ರಿಕೆ ಬಳಗವು ನಗರದ ಶಿವಯೋಗಾಶ್ರಮದ ಆವರಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ 2023ರ ವರ್ಷದ ವ್ಯಕ್ತಿ ಪ್ರಶಸ್ತಿಯನ್ನು ಸ್ವೀಕರಿಸಿ ಅವರು ಮಾತನಾಡಿದರು.

ಕಳೆದ 16 ವರ್ಷಗಳಿಂದ ನಿರಂತರವಾಗಿ ಬೇರೆ ಬೇರೆ ಕ್ಷೇತ್ರದ ಸಾಧಕರನ್ನು ಗುರ್ತಿಸಿ, ಗೌರವದ ಸನ್ಮಾನ ನೀಡುವ ಕಾರ್ಯವನ್ನು ಮುಂದುವರಿಸಿರುವ 'ಜಿಲ್ಲೆ ಸಮಾಚಾರ' ಪತ್ರಿಕಾ ಬಳಗದ ಕಾರ್ಯ ಪ್ರಶಂಸನೀಯವಾದುದು. ಪತ್ರಿಕೆಗಳು ಸಮಾಜದ ಅಂಕುಡೊಂಕುಗಳ ಬಗ್ಗೆ ಸುದ್ದಿ ಮಾಡುವುದರ ಜೊತೆಗೆ ಸಮಾಜದ ಹಿತಕ್ಕೆ ಶ್ರಮಿಸುವವರ ಬಗ್ಗೆ ಪರಾಮರ್ಶಿಸಿ, ಆಯ್ಕೆ ಮಾಡುವುದರೊಂದಿಗೆ ಸನ್ಮಾನದ ಗೌರವ ನೀಡುವಂತಹ 'ಪಾಜಿಟಿವ್ ಜರ್ನಲಿಸಂ'ನ್ನು ಕೂಡ ರೂಢಿಸಿಕೊಳ್ಳಬೇಕಾದ ಅವಶ್ಯತೆ ಇದೆ.

ಸನ್ಮಾನಗಳು ನಮ್ಮ ಜವಾಬ್ದಾರಿಯನ್ನು ಹೆಚ್ಚಿಸುತ್ತವೆ. ಇದು ಒಂದು ರೀತಿಯ ಟಾನಿಕ್ ಇದ್ದಂತೆ. ಭವಿಷ್ಯದಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಪರ ಕೆಲಸಗಳಲ್ಲಿ ತೊಡಗಲು ಪ್ರೇರಣೆ ದೊರೆಯುತ್ತದೆ ಎಂದು ಶಶಿಕುಮಾರ್ ಹೇಳಿ ಪತ್ರಿಕಾ ಬಳಗದವರ ಈ ವೈಶಿಷ್ಟಪೂರ್ಣ ಕಾರ್ಯಕ್ರಮ ಇಡೀ ರಾಜ್ಯಕ್ಕೆ ಮಾದರಿಯಾಗಲಿ ಎಂದು ಆಶಿಸಿದರು.

ಮೊದಲಿಗೆ ಶ್ರೀಮತಿ ನೇತ್ರಾ ಪ್ರಾರ್ಥನೆಯನ್ನು ಹಾಡಿದರು. ಪತ್ರಿಕಾ ಬಳಗದ ಅಧ್ಯಕ್ಷೆ ಶ್ರೀಮತಿ ಸತ್ಯಭಾಮ ಮಂಜುನಾಥ್ ಸ್ವಾಗತಿಸಿದರು. ಚಟುವಟಿಕೆ ಕುರಿತು ಬಳಗದ ಉಪಾಧ್ಯಕ್ಷ ಕೆ.ಎನ್.ಜಯಪ್ರಕಾಶ್ ಮಾತನಾಡಿದರು. ಸಂಸ್ಥಾಪಕ ವಿ.ಹನುಮಂತಪ್ಪ ಬಳಗದ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಮತ್ತು ಗಣ್ಯರಿಂದ ಹೆಚ್ಚಿನ ಉತ್ತೇಜನ ದೊರೆಯುತ್ತಿದೆ ಎಂದರು.

ಮೈಸೂರಿನ ವಿಶ್ರಾಂತ ಪ್ರೊ. ಎಚ್.ಎಸ್. ಹರಿಶಂಕರ್ ಮಾತನಾಡಿ ಜಿಲ್ಲಾಮಟ್ಟದ ಪತ್ರಿಕೆಯೊಂದು ಇಂತಹ ವೈಶಿಷ್ಟ್ಯದ ಕಾರ್ಯಕ್ರಮ ಮಾಡುವ ಮೂಲಕ ಎಲ್ಲರ ಮೆಚ್ಚುಗೆ ಪಾತ್ರವಾಗಿರುವುದು ಹೆಮ್ಮೆಯ ಸಂಗತಿ ಎಂದರು.

ಹಿರಿಯ ನ್ಯಾಯವಾದಿ ರಾಮಚಂದ್ರ ಕಲಾಲ್ ಮಾತನಾಡುತ್ತಾ ಸಮಾಜದಲ್ಲಿನ ನಿಷ್ಠಾವಂತರನ್ನು ಗುರ್ತಿಸುವ ಕೆಲಸ ಒಂದು ಪತ್ರಿಕೆಯಿಂದ ಆಗುತ್ತಿರುವುದು ಪ್ರಶಂಸನೀಯವೆನಿಸಿದೆ.

ಶ್ರೀಮಂತಿಕೆ ಹೆಚ್ಚಿದಂತೆ ರಾಜಕೀಯ ಜೊತೆಯಾಗುತ್ತದೆ. ಉತ್ತಮವಾಗಿ ಸಾಧನೆ ಮಾಡುವವರನ್ನು ಗೌರವಿಸುವಂತಹುದು ನಮ್ಮ ಜವಾಬ್ದಾರಿಯೂ ಹೌದು ಎಂದರು.

ಶ್ರೀ ಬಸವಪ್ರಭು ಸ್ವಾಮೀಜಿ ಆಶೀರ್ವಚನ ನೀಡಿ ಮಾನವನ ಜೀವನದಲ್ಲಿ ಶಾಶ್ವತವಾಗಿ ಉಳಿಯುವುದೆಂದರೆ ಸತ್ಕಾರ್ಯ. ಎಲ್ಲಾ ದಾರ್ಶನಿಕರ ಬದುಕು ನಮಗೆ ಪ್ರೇರಣೆ ಆಗಬೇಕು.ವ್ಯಕ್ತಿಗೆ ಸಾವು ಇದೆ. ವ್ಯಕ್ತಿತ್ವಕ್ಕೆ ಸಾವಿಲ್ಲ. ಸಮಾಜಕ್ಕೆ ಒಳಿತಾಗುವಂತಹ ಕಾರ್ಯಗಳನ್ನು ಮಾಡುತ್ತಿರುವ 'ತಪೋವನ'ದ ಶಶಿಕುಮಾರ್ ಇಂದಿನ ಯುವ ಪೀಳಿಗೆಗೆ ಅನುಕರಣೀಯರೆನಿಸುತ್ತಾರೆ. ಮಾನವೀಯತೆಯನ್ನು ರೂಢಿಸಿಕೊಂಡು ಸಮಾಜದ ಹಿತಕ್ಕೆ ಶ್ರಮಿಸುವಂತಹ ಇಂತಹವರನ್ನು ಸನ್ಮಾನಿಸುತ್ತಿರುವ ಪತ್ರಿಕಾ ಬಳಗದ ಕಾರ್ಯಕ್ಕೆ ಎಲ್ಲರೂ ಅಭಿನಂದಿಸೋಣ ಎಂದರು.

'ವರ್ಷದವ್ಯಕ್ತಿ'ಪ್ರಶಸ್ತಿಯನ್ನುಪ್ರದಾನಿಸಿದ ನಂತರ ವಿಶ್ರಾಂತ ಲೋಕಾಯುಕ್ತರಾದ ಗೌರವಾನ್ವಿತ ಸಂತೋಷ್ ಹೆಗಡೆಯವರು ಮಾತನಾಡಿ ಇಂದು ಸಮಾಜವನ್ನು ದುರಾಸೆ ಎಂಬ ಮದ್ದೇ ಇಲ್ಲದ ರೋಗವು ಪೆಡಂಭೂತವಾಗಿ ಕಾಡುತ್ತಿದೆ. ತೃಪ್ತಿಯನ್ನು ರೂಢಿಸಿಕೊಂಡಾದ ದುರಾಸೆ ದೂರವಾಗುತ್ತದೆ. ಭ್ರಷ್ಟಾಚಾರಿಗಳನ್ನು ಕಠಿಣವಾಗಿ ಕ್ರಮ ಅನುಸರಿಸುವ ಕಾನೂನು ಜಾರಿಯಾಗಬೇಕಾಗಿದೆ. ಯುವ ಜನಾಂಗವು ಸನ್ಮಾರ್ಗದಲ್ಲಿ ನಡೆದು ದೇಶದ ಕೀರ್ತಿ ಪಸರಿಸುವಂತಾಗಲು ಸಂಕಲ್ಪ ಮಾಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಬಳಗದ ಸಹ ಕಾರ್ಯದರ್ಶಿ ಶ್ರೀಮತಿ ಭಾರತಿ ಸನ್ಮಾನ ಪತ್ರ ಓದಿದರು. ಬಳಗದ ಗುರುಬಸವರಾಜ ವಂದಾನರ್ಪಣೆ ಮಾಡಿದರು. ರಾಘವೇಂದ್ರನಾಯರಿ ಕಿರುಪರಿಚಯ ಮಾಡಿದರು. ಪತ್ರಿಕಾ ಸಂಪಾದಕ ಎಚ್. ವೆಂಕಟೇಶ್,ಮಹಾಂತೇಶ್ ವಿ.ಒಣರೊಟ್ಟಿ ಸೇರಿದಂತೆ ಪತ್ರಿಕಾ ಬಳಗದ ಸದಸ್ಯರು, ಹಿತೈಷಿಗಳು ಹಾಜರಿದ್ದು, ಕಾರ್ಯಕ್ರಮದ ಯಶಸ್ಸನ್ನು ಸಾಕ್ಷೀಕರಿಸಿದರು.

ಈ ಸಂದರ್ಭದಲ್ಲಿ ಶಶಿಕುಮಾರ್ ಪತ್ನಿ ಶ್ರೀಮತಿ ಜಯಲಕ್ಷ್ಮಿ ಹಾಗೂ ಕುಟುಂಬವರ್ಗದವರು ಉಪಸ್ಥಿತರಿದ್ದರು. ಕೊನೆಯಲ್ಲಿ ವಿವಿಧ ಸಂಘ-ಸಂಸ್ಥೆಗಳವರು, ಹಿತೈಷಿಗಳು ಪ್ರಶಸ್ತಿ ಪುರಸ್ಕೃತ ದಂಪತಿಗೆ ಶಾಲು, ಹೂಮಾಲೆಯೊಂದಿಗೆ ಸನ್ಮಾನಿಸಿ ಸಂಭ್ರಮಿಸಿದರು.

# ಇ-ಸ್ವತ್ತು ವಿತರಿಸಿ ಬಡವರಿಗೆ ಅನುಕೂಲ ಕಲ್ಪಿಸಿ

» ದಾವಣಗೆರೆ



ದಾವಣಗೆರೆಮಹಾನಗರಪಾಲಿಕೆಯಿಂದಮಾರ್ಚ್ ಅಂತ್ಯದವರೆಗೆ ಎಲ್ಲಾ ವಾರ್ಡ್‌ಗಳಲ್ಲಿನ ಆಸ್ತಿಗಳಿಗೆ ಇ-ಆಸ್ತಿ ಸೇವೆ ದಾಖಲೆ ನೀಡುತ್ತಿದ್ದು ಜನರು ಇದರ ಸದುಪಯೋಗ ಮಾಡಿಕೊಳ್ಳಬೇಕೆಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ನಗರದ ನಿಟ್ಟುವಳ್ಳಿಯ ದುರ್ಗಾಂಬಿಕ ದೇವಸ್ಥಾನದ ಆವರಣದಲ್ಲಿ ಜಿಲ್ಲಾ ಆಡಳಿತ, ಮಹಾನಗರ ಪಾಲಿಕೆಯಿಂದ ಆಸ್ತಿ ತೆರಿಗೆ ಪಾವತಿಸುವ ಮಾಲಿಕರಿಗೆ ಮನೆ ಬಾಗಿಲಿಗೆ ಇ-ಆಸ್ತಿ ಸೇವೆ ದಾಖಲೆ ಒದಗಿಸುವ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ಹಿಂದೆ 2012 ರಲ್ಲಿ ದಾವಣಗೆರೆ ನಗರದಲ್ಲಿ 45 ಸಾವಿರ ಜನರಿಗೆ ಆಶ್ರಯ ಯೋಜನೆಯಡಿ ಅವರು ವಾಸಿಸುವ ಜಾಗಕ್ಕೆ ಹಕ್ಕುಪತ್ರ ನೀಡಲಾಗಿದೆ. ಆ ಸಂದರ್ಭದಲ್ಲಿ ಯಾವುದೇ ಮನೆ ಸಂಖ್ಯೆ ಇರಲಿಲ್ಲ. ಅವರೆಲ್ಲರೂ ಖಾತೆ ಮಾಡಿಸಿಕೊಂಡಿದ್ದು ಎಲ್ಲ ಹಕ್ಕುಗಳನ್ನು ಹೊಂದಲು ಇ-ಆಸ್ತಿ ದಾಖಲೆ ಬಹಳ ಪ್ರಮುಖವಾಗಿರುತ್ತದೆ. ಆ ಸಂದರ್ಭದಲ್ಲಿ ವಾಸಿಸುತ್ತಿದ್ದ ಮನೆ ಮಾಲಿಕರಿಗೆ ಹಕ್ಕುಪತ್ರ ವಿತರಣೆಗೆ ಇನ್ನೂ ಕೆಲವು ಬಾಕಿ ಉಳಿದಿದೆ ಎಂದರು.

ಜನರು ಆಸ್ತಿ ತೆರಿಗೆ ಪಾವತಿಸಿ ಇ-ಆಸ್ತಿ ದಾಖಲೆ ಪಡೆಯಲು ಬಂದಾಗ ಈ ಹಿಂದೆ ಬಡಾವಣೆ ನಕ್ಷೆ, ಮನೆ ನಕ್ಷೆ, ಮನೆ ನಿರ್ಮಾಣ ಪರವಾನಗಿ ದಾಖಲೆಗಳನ್ನು ಕೇಳದೆ ಪ್ರಾಯೋಗಿಕವಾದ ದಾಖಲೆಗಳನ್ನಷ್ಟೆ ಪರಿಗಣಿಸಿ ಜನರಿಗೆ ಅಲೆದಾಡಿಸದೆ ಇ-ಆಸ್ತಿ ಖಾತೆ ಮಾಡಿಕೊಡಲು ಸೂಚನೆ ನೀಡಿದರು.

ಜನರು ಆಸ್ತಿ ತೆರಿಗೆ ಕಟ್ಟಿ ಇ-ಆಸ್ತಿ ದಾಖಲೆ ಪಡೆಯುವುದರಿಂದ ಪರೋಕ್ಷವಾಗಿ ಪಾಲಿಕೆಗೆ ಆದಾಯವು ಬರಲಿದ್ದು ನೀರಿನ ಶುಲ್ಕ ವಸೂಲಿಯಾಗುತ್ತದೆ. ವಲಯವಾರು ಪ್ರಗತಿ ವರದಿಯನ್ನು ಪ್ರತಿ ವಾರ ನೀಡಬೇಕೆಂದ ಸಚಿವರು ಅನುಮೋದಿಸಿದ ದಾಖಲೆ ಎಷ್ಟು, ತಿರಸ್ಕರಿಸಿದ ಆಸ್ತಿ ಎಷ್ಟು, ಇದಕ್ಕೆ ಕಾರಣವೇನು ಎಂಬ ವರದಿಯನ್ನು ಪ್ರತಿ ವಾರ ನೀಡಲು ತಿಳಿಸಿದರು.

ರೂ.250 ಲಕ್ಷಗಳಲ್ಲಿ 29, 32, 35, 36 ನೇ ವಾರ್ಡ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ. ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿನ ಪ್ರಮುಖ ರಸ್ತೆಗಳನ್ನು ಈಗಾಗಲೇ ಸರ್ಕಾರದ ಅನುದಾನದಿಂದ ನಿರ್ಮಾಣ ಮಾಡಲಾಗಿದ್ದು ಪಾಲಿಕೆ ಅನುದಾನದಿಂದ ಮಾಡುವ ಪ್ರಮುಖ ರಸ್ತೆಗಳು ಬಾಕಿ ಉಳಿದಿಲ್ಲ.

ಪಾಲಿಕೆಯ ಅನುದಾನದಲ್ಲಿ ವಾರ್ಡ್ ರಸ್ತೆ, ಗುಂಡಿಮುಚ್ಚುವ ಕಾಮಗಾರಿ, ಬ್ರಿಡ್ಜ್, ಚರಂಡಿ ಕಾಮಗಾರಿ ತೆಗೆದುಕೊಳ್ಳಲು ತಿಳಿಸಿ ಪಾಲಿಕೆಗೆ ಮುಂದಿನ ಆರ್ಥಿಕ ವರ್ಷದಲ್ಲಿ ಹೆಚ್ಚಿನ ಅನುದಾನ ಸರ್ಕಾರದಿಂದ ಬರಲಿದೆ. ಈಗಾಗಲೇ ಜಲಸಿರಿ ಕಾಮಗಾರಿ, ಅಂಡರ್‌ಗ್ರೌಂಡ್ ವಿದ್ಯುತ್ ಕೇಬಲೀಕರಣ, ರೂ.25 ಕೋಟಿಯಲ್ಲಿ ವಿಸ್ತರಣೆಯಾದ ಬಡಾವಣೆಗಳಿಗೆ ಒಳಚರಂಡಿ ನಿರ್ಮಾಣದ ಕಾಮಗಾರಿಗಳು ನಡೆಯುತ್ತಿವೆ ಎಂದರು.ಜಿಲ್ಲೆ ಪ್ರಥಮ; ಕಂದಾಯ ಇಲಾಖೆಯಡಿ ಜಿಲ್ಲೆ ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದ್ದು ಅದೇ ರೀತಿ ಪಾಲಿಕೆಯಿಂದ ಎಲ್ಲಾ ನಾಗರಿಕರ ಸೇವೆಗಳನ್ನು ಆನ್‌ಲೈನ್ ಮಾಡುವ ನಿಟ್ಟಿನಲ್ಲಿ ಕಚೇರಿ ಗಣಕೀಕರಣವನ್ನು ಆದಷ್ಟು ಬೇಗ ಮಾಡಿ ಜನರಿಗೆ ಗುಣಮಟ್ಟದ ಸೇವೆ ಒದಗಿಸಲು ತಿಳಿಸಿದರು.ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ.ಮಾತನಾಡಿ ಜನಸ್ನೇಹಿ ಆಡಳಿತ ನೀಡಲು ಸರ್ಕಾರ ಬದ್ದವಾಗಿದ್ದು ಮನೆ ಬಾಗಿಲಿಗೆ ಸೇವೆ ಒದಗಿಸಲಾಗುತ್ತಿದೆ. ನನ್ನ ಆಸ್ತಿ, ನನ್ನ ದಾಖಲೆ, ನನ್ನ ಹಕ್ಕು ಘೋಷವಾಕ್ಯದಡಿ ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಇ-ಆಸ್ತಿ ದಾಖಲೆ ನೀಡಲು ಚಾಲನೆ ನೀಡಲಾಗಿದೆ ಎಂದರು.ಇ-ಆಸ್ತಿ ದಾಖಲೆ ಪಡೆಯುವುದರಿಂದ ಹಲವು ಸಮಸ್ಯೆಗಳಿಗೆ ಪರಿಹಾರ ದೊರಕುತ್ತದೆ. ಇದರಿಂದ ಆಸ್ತಿ ಮಾಲಿಕರಿಗೆ ಶೇ 100 ರಷ್ಟು ಮಾಲಿಕತ್ವ ಸಿಗಲಿದೆ. ಇದರಿಂದ ಆಸ್ತಿ ಮಾರಾಟ, ಖರೀದಿ ಮತ್ತು ಮನೆ ನಿರ್ಮಾಣಕ್ಕೆ ಬ್ಯಾಂಕ್ ಸಾಲ ಪಡೆಯಲು ಅನುಕೂಲವಾಗುತ್ತದೆ. ನಿವೇಶನ ಹಕ್ಕುಪತ್ರ ಪಡೆದವರು ಸಹ ಇ-ಆಸ್ತಿ ಪಡೆದುಕೊಳ್ಳಬೇಕು. ಈ ಕಾಯಿದೆಯು 2021 ರಿಂದ ಜಾರಿಗೆ ಬಂದಿದೆ.

ಪಾಲಿಕೆ ವ್ಯಾಪ್ತಿಯಲ್ಲಿ 1.75 ಲಕ್ಷ ಆಸ್ತಿಗಳಲ್ಲಿ ಇಲ್ಲಿಯವರೆಗೆ ಕೇವಲ 30 ಸಾವಿರ ಆಸ್ತಿಗೆ ಇ-ಆಸ್ತಿ ದಾಖಲೆಗಳನ್ನು ಪಡೆಯಲಾಗಿದೆ. ಇನ್ನೂ 1.45 ಲಕ್ಷ ಇ-ಸ್ವತ್ತುಗಳನ್ನು ವಿತರಣೆ ಮಾಡಬೇಕಾಗಿದೆ ಎಂದರು.

ತೆರಿಗೆ ಹಣಕಾಸು ಸಮಿತಿ ಅಧ್ಯಕ್ಷರಾದ ಉದಯಕುಮಾರ್, ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷೆ ಮೀನಾಕ್ಷಿ ಜಗದೀಶ್, ಪಾಲಿಕೆ ಸದಸ್ಯರಾದ ಸವಿತ ಗಣೇಶ್, ನಾಗರತ್ನಮ್ಮ, ಜಯಮ್ಮಗೋಪಿನಾಥ್, ಚಮನ್‌ಸಾಬ್, ಮಂಜುನಾಥ್, ನಾಗರಾಜ್, ನಗರ ಯೋಜನಾ ಅಧ್ಯಕ್ಷ ಲತೀಫ್, ಮುಖಂಡರಾದ ನಾಗಭೂಷಣ್, ಶೇಖರಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಪಾಲಿಕೆ ಆಯುಕ್ತರಾದ ರೇಣುಕಾ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

## ನಾಯಕನಹಟ್ಟಿ ಪಪಂವತಿಯಿಂದ ಇ-ಖಾತೆ ಅಂದೋಲನ



» ನಾಯಕನಹಟ್ಟಿ

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರಿಗೆ ಆಸ್ತಿ ಮಾಲೀಕರಿಗೆ ಮಾನ್ಯ ಜಿಲ್ಲಾಧಿಕಾರಿಗಳು ಚಿತ್ರದುರ್ಗ ಜಿಲ್ಲೆರವ ಆದೇಶದಂತೆ ಪಟ್ಟಣ ಪಂಚಾಯಿತಿ ಆಸ್ತಿಗಳನ್ನು ಕೆ.ಎಂ.ಎಫ್-24 ಆಸ್ತಿ ಕಣಜ ತಂತ್ರಾಂಶದಲ್ಲಿ ಕಾಲೋಚಿತಗೊಳಿಸಲು ತಮ್ಮ ಆಸ್ತಿಗಳಿಗೆ ಇ-ಆಸ್ತಿ ಖಾತೆ ಮಾಡಿಕೊಡುವ ಆಂದೋಲನವನ್ನು 12.02.2024ರವರೆಗೆ ಪಟ್ಟಣ ಪಂಚಾಯಿತಿಯಿಂದ ಹಮ್ಮಿಕೊಂಡಿದ್ದು, ಇ-ಆಸ್ತಿ ಖಾತೆ ತೆಗೆದುಕೊಂಡದೇ ಇರುವವರು ಈ ಕೆಳಕಂಡ ದಾಖಾಲತಿಗಳನ್ನು ಸಲ್ಲಿಸಿ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಸಲ್ಲಿಸಿದರು.

1. **ಇ-ಆಸ್ತಿ ಅರ್ಜಿ**
2. **ಬಡಾವಣೆಯಾಗದಿದ್ದಲ್ಲಿ ಭೂಪರಿವರ್ತನ ಆದೇಶ ಪ್ರತಿ ಮತ್ತು ನಗರ ಮತ್ತು ಗ್ರಾಮಾಂತರ ಯೋಜನೆ ಇಲಾಖೆ ಅನೋಮೋದಿತ ನಕ್ಷೆ, ಸ್ವತ್ತಿನ ದಾಖಲೆ, ಕ್ರಯಪತ್ರ ವಿಭಾಗ ಪತ್ರ, ದಾನಪತ್ರ, ವೀಲ್ ಪತ್ರ, ಸೇಲ್ಸ್ ಸರ್ಟಿಫೀಕೆಟ್**
4. **ಪ್ರಸ್ತಕ ಸಾಲಿನವರೆಗೆ ಆಸ್ತಿ ತೆರಿಗೆ ಮತ್ತು ನೀರಿನ ತೆರಿಗೆ ಪಾವತಿಸಿರುವ ರಶೀದಿ**
5. **ಗ್ರಾಮಠಾಣೆಗೆ ಒಳಪಟ್ಟಿದ್ದರೆ 1974-75ಸಾಲೀನ ಹಿಂದಿನ ದಾಖಲೆಗಳು**
6. **ನಿವೇಶನ ಕಟ್ಟಡ ಛಾಯಚಿತ್ರ, ಖಾಲಿ ನಿವೇಶನವಾಗಿದ್ದಲ್ಲಿ ಸ್ವಚ್ಛಗೊಳಿಸಿರುವ ಛಾಯಚಿತ್ರ, ಕಟ್ಟಡ್ವಾಗಿದ್ದಲ್ಲಿ ಕಟ್ಟಡ ಪರವಾನಿಗೆ ಪ್ರತಿ ಹಾಗೂ ಇತರೆ ದಾಖಲಾತಿಗಳು.**
7. **ಮಾಲೀಕರ ಭಾವಚಿತ್ರ(ಪಾಸ್‌ಪೋಟೋ),**
8. **ಮಾಲೀಕರ ಮತದಾರ ಗುರುತಿನ ಚೀಟಿ/ ಪಾನ್‌ಕಾರ್ಡ್, ಡ್ರೈವಿಂಗ್ ಲೈಸೆನ್ಸ್/ ರೇಷನ್ ಕಾರ್ಡ್ ಈ ದಾಖಲಾತಿಗಳು ತೆಗೆದುಕೊಂಡು ಬರಬೇಕೆಂದು ತಿಳಿಸಿದರು.**

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಕರವಸೂಲಿಗಾರ ಸಂದೀಪ್, ಟಿ.ತಿಪ್ಪೇಸ್ವಾಮಿ, ಮಧು, ಅಭಿ, ದಯಾನಂದ್, ಅಮ್ರಿನ್ ತಾಜ್.ಎ. ಹಾಗೂ ಇತರರು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಅಡಿಕೆ ಬೆಳೆಯ ಸುಧಾರಿತ ಬೇಸಾಯ ತಾಂತ್ರಿಕತೆ, ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ಗೊಬ್ಬರ ತಯಾರಿಕೆ ಕುರಿತು ತರಬೇತಿ ಕಾರ್ಯಾಗಾರ

# ಅಡಿಕೆ ಉತ್ಪಾದನೆ: ಕರ್ನಾಟಕ ದೇಶದಲ್ಲಿಯೇ ಮೊದಲ ಸ್ಥಾನ

» ಚಿತ್ರದುರ್ಗ



ನಮ್ಮ ದೇಶದಲ್ಲಿ ಕರ್ನಾಟಕದಲ್ಲಿ ಶೇ.79ರಷ್ಟು ಅಡಿಕೆ ಬೆಳೆ ಬೆಳೆಯುತ್ತಿದ್ದು, ವಿಸ್ತೀರ್ಣ ಮತ್ತು ಉತ್ಪಾದನೆಯಲ್ಲಿ ಕರ್ನಾಟಕ ರಾಜ್ಯ ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದೆ ಎಂದು ಶಿವಮೊಗ್ಗ ಅಡಿಕೆ ಸಂಶೋಧನಾ ಕೇಂದ್ರ ಮುಖ್ಯಸ್ಥ ಡಾ. ನಾಗರಾಜ್ ಅಡಿವಪ್ಪರ್ ಹೇಳಿದರು.

ಹಿರಿಯೂರಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ರೈತರಿಗೆ "ಅಡಿಕೆ ಬೆಳೆಯ ಸುಧಾರಿತ ಬೇಸಾಯ ತಾಂತ್ರಿಕತೆ ಹಾಗೂ ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ಗೊಬ್ಬರ ತಯಾರಿಕೆ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಡಿಕೆ ಬೆಳೆಯನ್ನು ಬೆಳೆಯಲು ನೀರು ಬಸಿದು ಹೋಗುವ ಕೆಂಪು ಮಣ್ಣು ಸೂಕ್ತವಾಗಿದ್ದು, ನೀರು ನಿಲ್ಲುವ ಜೌಗು ಮತ್ತು ಸವಳು ಮಣ್ಣಿನ ಪ್ರದೇಶಗಳು ಅಡಿಕೆಗೆ ಸೂಕ್ತವಲ್ಲ. ಮಣ್ಣಿನ ರಸಸಾರ 6 ರಿಂದ 7 ಸೂಕ್ತ. ಅಡಿಕೆಯನ್ನು 9*9 ಅಡಿ ಅಂತರದಲ್ಲಿ 2*2*2 ಅಡಿ ಅಳತೆಯ ಗುಂಡಿಯಲ್ಲಿ ನಾಟಿ ಮಾಡುವುದು ಸೂಕ್ತ ಎಂದು ತಿಳಿಸಿದ ಅವರು, ಅಡಿಕೆಯಲ್ಲಿ ಅಂತರ ಬೆಳೆಯಾಗಿ ಬಾಳೆ, ವೀಳ್ಯದೆಳೆ, ಜಾಯಿಕಾಯಿ ಮತ್ತು ಕರಿಮೆಣಸು ಚಿತ್ರದುರ್ಗ ಜಿಲ್ಲೆಗೆ ಸೂಕ್ತವಾಗಿದೆ ಎಂದು ಹೇಳಿದರು. ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಜಿಲ್ಲೆಯ ರೈತರು ಅಡಿಕೆಯನ್ನು ಪ್ರಮುಖ ತೋಟಗಾರಿಕೆ ವಾಣಿಜ್ಯ ಬೆಳೆಯಾಗಿ ಬೆಳೆಯಲು ಆಸಕ್ತಿ ತೋರುತ್ತಿದ್ದು, ಬೆಳೆಯಲ್ಲಿ ಹೆಚ್ಚಿನ ಇಳುವರಿ ಪಡೆಯಲು ಉತ್ತಮ ತಳಿಗಳ ಆಯ್ಕೆ, ಬೇಸಾಯ ಕ್ರಮ, ಪೋಷಕಾಂಶಗಳ ನಿರ್ವಹಣೆ, ರೋಗ ಮತ್ತು ಕೀಟಗಳ ನಿರ್ವಹಣೆಯ ತಾಂತ್ರಿಕ ಮಾಹಿತಿ ಅಗತ್ಯವಿದೆ. ಇದಲ್ಲದೆ ರೈತರಿಗೆ ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ಮಾಡುವ ವಿಧಾನದ ಮಾಹಿತಿಯೊಂದಿಗೆ ಪ್ರಾತ್ಯಕ್ಷಿಕೆ ಮಾಡುವುದು ಸಹ ಈ ತರಬೇತಿಯ ಪ್ರಮುಖ ವಿಷಯವಾಗಿದ್ದು, ಇದರಿಂದ ಅಡಿಕೆ ಸಿಪ್ಪೆಯನ್ನು ಎಲ್ಲೆಂದರಲ್ಲೆ ಬಿಸಾಕುವುದು ಹಾಗೂ ಇದರಿಂದಾಗುವ ಅವಘಡಗಳನ್ನು ತಪ್ಪಿಸಲು ಮತ್ತು ರೈತರು ಸ್ವತಃ ತಮ್ಮ ತೋಟಕ್ಕೆ ಬೇಕಾಗುವ ಕಾಂಪೋಸ್ಟ್ ಗೊಬ್ಬರ ಮಾಡಿಕೊಳ್ಳಬಹುದಾಗಿರುವುದರಿಂದ ಈ ತರಬೇತಿಯು ಸಹಕಾರಿಯಾಗಲಿದೆ ಎಂದರು.

ತೋಟಗಾರಿಕೆ ತಜ್ಞ ಡಾ.ಸುದೀಪ್ ಮಾತನಾಡಿ ಅಡಿಕೆಯ ವಿವಿಧ ತಳಿಗಳು ಮತ್ತು ಅವುಗಳ ವಿಶೇಷ ಗುಣಗಳು, ಸಸ್ಯಾಭಿವೃದ್ಧಿಯ ಕ್ರಮಗಳು, ಪೋಷಕಾಂಶಗಳ ನಿರ್ವಹಣೆ, ಹಸಿರೆಲೆ ಗೊಬ್ಬರದ ನಿರ್ವಹಣೆ, ಹಾಗೂ ನೀರು ಮತ್ತು ಬಸಿಗಾಲುವೆಯ ನಿರ್ವಹಣೆ ಕುರಿತು ತಿಳಿಸಿದರು.

ಕೀಟಶಾಸ್ತ್ರ ತಜ್ಞೆ ಡಾ. ಸ್ವಾತಿ ಅವರು ಅಡಿಕೆಯಲ್ಲಿ ಬರುವ ಪ್ರಮುಖ ರೋಗಗಳಾದ ಸುಳಿ ಕೊಳೆ, ಹಿಂಗಾರು ಒಣಗುವ ರೋಗ, ದುಂಡಾಣು ಎಲೆ ಪಟ್ಟಿ ರೋಗ, ಅಣಬೆ ರೋಗ, ಎಲೆ ಚುಕ್ಕಿ ಮತ್ತು ಹಿಡಿಮುಂಡಿಗೆ ಹಾಗೂ ಪ್ರಮುಖ ಕೀಟಗಳಾದ ನುಸಿ, ರುಗೋಸ್ ಸುರಳಿ ಸುತ್ತುವ ಬಿಳಿನೊಣ, ಸುಳಿ ತಿಗಣೆ, ಹಿಂಗರು ತಿನ್ನುವ ಹುಳುಗಳ ಹಾನಿಯ ಲಕ್ಷಣ ಮತ್ತು ಅವುಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು.

## ಫಾಸ್ಟ್ ನ್ಯೂಸ್

### ಮನೆ ಬಾಗಿಲಿಗೆ ಇ-ಆಸ್ತಿ ಸೇವೆ

» ದಾವಣಗೆರೆ

ಮಲೇಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿರುವ ಮನೆ ಬಾಗಿಲಿಗೆ ಇ-ಆಸ್ತಿ ಸೇವೆ ನೀಡಲು ಮಾ. 12 ರ ವರೆಗೆ ಇ-ಆಸ್ತಿ ಖಾತಾ ಆಂದೋಲನ ಕಾರ್ಯಕ್ಕಾಗಿ ಸಾರ್ವಜನಿಕರು ಅರ್ಜಿ ಸಲ್ಲಿಸಬಹುದು. ಸಲ್ಲಿಸಬೇಕಾದ ದಾಖಲೆಗಳು: ಅರ್ಜಿ, ಅರ್ಜಿದಾರರ ಫೋಟೋ ಮತ್ತು ಮನೆ ಫೋಟೋ, ಪಾನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಆಸ್ತಿಗೆ ಸಂಬಂಧಿಸಿದ ದಾಖಲೆಗಳು, 15 ವರ್ಷಗಳ ಇ.ಸಿ , ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ, ಭೂ ಪರಿವರ್ತನೆ ಆದೇಶ, ಅನುಮೋದಿತ ಬಡಾವಣೆ ನಕ್ಷೆ, ಆಸ್ತಿ ವಿವರಗಳನ್ನು 'ಆಸ್ತಿ ಕಣಜ' ಆನ್‌ಲೈನ್‌ನಲ್ಲಿ ಸಲ್ಲಿಸಬೇಕಾದ ದಾಖಲೆಗಳು: 2016-17 ನೇ ಸಾಲಿನಿಂದ 2023-24ನೇ ಸಾಲಿನವರೆಗೆ ಸ್ವಯಂ ಘೋಷಿತ ಆಸ್ತಿತೆರಿಗೆ ಪಾವತಿಸಿರುವ ಜೆರಾಕ್ಸ್, ನೀರಿನ ತೆರಿಗೆ ಪಾವತಿಸಿರುವ ಚಲನ್, ಕಟ್ಟಡ ನಿರ್ಮಾಣ ಮಾಡಲು ಪಡೆದಿರುವ ಅನುಮೋದಿತ ನಕ್ಷೆ ಹಾಗೂ ಪರವಾನಗಿ ಜೆರಾಕ್ಸ್, ಆಸ್ತಿಯ ಜಿ.ಪಿ.ಎಸ್. ಭಾವಚಿತ್ರ, ವಿದ್ಯುಚ್ಛಕ್ತಿ(ಬಿಲ್) ಆರ್. ಆರ್. ನಂಬರ್, ಭೂ ಪರಿವರ್ತನೆ ಆದೇಶ, ಆಗದೇ ಇದ್ದಲ್ಲಿ ಪಹಣಿ ಪ್ರತಿಯನ್ನು ಸಲ್ಲಿಸಬೇಕೆಂದು ಮಲೇಬೆನ್ನೂರು ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಸೋಲಾರ್ ಪ್ಲಾಂಟ್‌ನಲ್ಲಿ ಕೇಬಲ್ ಕಳವು



» ನಾಯಕನಹಟ್ಟಿ

ಜಗಳೂರು ತಾಲ್ಲೂಕಿನ ಸಾಲೇಹಳ್ಳಿ ಗ್ರಾಮದ ಹತ್ತಿರ ಇರುವ ಸೋಲಾರ್ ಪ್ಲಾಂಟ್‌ನಲ್ಲಿ ರಾತ್ರಿ ವೇಳೆಯಲ್ಲಿ ಸುಮಾರು 10:30 ಕ್ಕೆ 5 ಜನ ಕಳ್ಳರು ಕೇಬಲ್ ಕನೆಕ್ಟ್ ವೈರ್ ಕತ್ತರಿಸಿ ಕೊಂಡುಹೋಗಿದ್ದಾರೆ. ಸಿ.ಸಿ. ಕ್ಯಾಮರಾದಲ್ಲಿ ಫೋಟೋ ಮತ್ತು ವಿಡಿಯೋ ಸೆರೆಹಿಡಿಯಲಾಗಿದೆ. ಜಗಳೂರು ಪೋಲಿಸ್ ಠಾಣೆಯವರು ಸ್ಥಳಕ್ಕೆ ಆಗಮಿಸಿ ಪರೀಶಿಲಿಸಿ ಮಹಜರ್ ಪಡೆದೆಕೊಂಡು ಹೋಗಿದ್ದಾರೆ ಎಂದು ಸೋಲಾರ್ ಪ್ಲಾಂಟ್‌ನಲ್ಲಿ ಕೆಲಸ ಮಾಡುತ್ತಿರುವ ಶಿವರಾಜ್ ಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ರವಿಕೃಷ್ಣಸುಂದರ್,ಕೃಷ್ಣ ಕುಮಾರ್, ಶಿವರಾಜ್‌ಕುಮಾರ್, ಮಂಜುನಾಥ.ಟಿ. ಸ್ವಾಮಿ, ಮಹಂತೇಶ್, ಅನಿಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

### ಉಡುವಳ್ಳಿ ಕರಿಯಮ್ಮದೇವಿ ಪ್ರಾಣಪ್ರತಿಷ್ಠಾಪನೆ



» ಹೊಸದುರ್ಗ

ತಾಲೂಕಿನ ಲಕ್ಕಿಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಶಕ್ತಿದೇವತೆ ಶ್ರೀ ಉಡುವಳ್ಳಿ ಕರಿಯಮ್ಮದೇವಿ ನೂತನ ವಿಗ್ರಹಕ್ಕೆ ಧಾರ್ಮಿಕ ಸಾಂಪ್ರದಾಯದಂತೆ ಶಾಸ್ತ್ರೋಕ್ತವಾಗಿ ಸಕಲ ಭಕ್ತಾದಿಗಳ ಸಮ್ಮುಖದಲ್ಲಿ ಬುಧವಾರ ಪ್ರಾಣಪ್ರತಿಷ್ಠಾಪನೆ ಮಾಡಲಾಯಿತು.ತರೀಕೆರೆ ತಾಲೂಕಿನ ದುಗ್ಗಲಪುರ ಗ್ರಾಮದ ಕೇಶವಮೂರ್ತಿ ಎಂಬ ಶಿಲ್ಪಿ ಶಾಸ್ತ್ರ ಸಾಂಪ್ರದಾಯದಂತೆ ಅಮ್ಮನವರ ಮೂರ್ತಿ ಕೆತ್ತಿದ್ದಾರೆ. ದುಗ್ಗಲಪುರ ಗ್ರಾಮದಿಂದ ಕರಿಯಮ್ಮ ದೇವಿಯ ಪೂಜಾರರು ಮತ್ತು ಭಕ್ತರು ಮಂಗಳವಾರ ಕಲ್ಲತ್ತಿಗಿರಿ ಪುಣ್ಯಕ್ಷೇತ್ರಕ್ಕೆ ತೆಗೆದುಕೊಂಡು ಹೋಗಿದ್ದು, ಬುಧವಾರ ಬೆಳಿಗ್ಗೆ ಧಾರ್ಮಿಕ ಸಾಂಪ್ರದಾಯದಂತೆ ಅಮ್ಮನವರಿಗೆ ಪ್ರಾಣ ಪ್ರತಿಷ್ಠೆ ನೆರವೇರಿತು. ಇದೇ ಸಂದರ್ಭದಲ್ಲಿ ಸೇರಿದ್ದ ಭಕ್ತರಿಗೆ ಪ್ರಸಾದ ವಿನಿಯೋಗ ನಡೆಯಿತು. ನಂತರ ಅಲ್ಲಿಂದ ನಡಿಗೆಯ ಮೂಲಕ ಲಕ್ಕಿಹಳ್ಳಿ ಗ್ರಾಮದ ಕಡೆಗೆ ದೇವರ ಮೂರ್ತಿಯನ್ನು ಪ್ರಯಾಣ ಬೆಳೆಸಲಾಯಿತು. ಶುಕ್ರವಾರದಂದು ಲಕ್ಕಿಹಳ್ಳಿ ಗ್ರಾಮಕ್ಕೆ ಅಮ್ಮನವರನ್ನು ವಿಜೃಂಭಣೆಯಿಂದ ಬರಮಾಡಿಕೊಳ್ಳಲಾಗುವುದು. ಗ್ರಾಮದ ಒಳಗಡೆ ಆಗಮಿಸಿದಾಗ, ಮೊದಲಿಗೆ ಕಾಳಚಾರ್ ಮನೆಯಲ್ಲಿ ಅವರ ಕುಟುಂಬಸ್ಥರಿಂದ ದೇವರಿಗೆ ಪೂಜೆ ನೆರವೇರುವುದು. ನಂತರ ದೇವರನ್ನು ತನ್ನ ದೇವಸ್ಥಾನಕ್ಕೆ ಕರೆದೊಯ್ಯಲಾಗುವುದು. ಶುಕ್ರವಾರ ಸಂಜೆ ಅಮ್ಮನವರ ವಿಗ್ರಹ ಕೆತ್ತಿದ ಶಿಲ್ಪಿ ಮತ್ತು ಪುರೋಹಿತರಿಂದ ಧನವಾಸ, ಧಾನ್ಯವಾದ, ಪುಷ್ಪವಾಸ, ಮಹಾಮಂಗಳಾರತಿ ಮತ್ತು ಇನ್ನಿತರ ಪೂಜಾ ಕಾರ್ಯಗಳು ನಡೆಯಲಿವೆ. ಇದೇ ಸಂದರ್ಭದಲ್ಲಿ ಕರಿಯಮ್ಮ ದೇವಿಯ ಗುಡಿಕಟ್ಟಿನ ಅಣ್ಣತಮ್ಮಂದಿರು, ನೆಂಟರು ಅವರಿಂದ ಭಕ್ತರಿಗೆ ಪ್ರಸಾದ ವಿನಿಯೋಗ ನಡೆಯಲಿದೆ.

## ಸಂತ ಸೇವಾಲಾಲ್ 285ನೇ ಜಯಂತಿ

# ಲಂಬಾಣಿ ಜನಾಂಗದ ಅಭಿವೃದ್ಧಿಗೆ ಬದ್ಧ

### ಶಿಕ್ಷಣವಂತರಾಗಿ ಬಡತನ ನಿವಾರಣೆಗೆ ಮುಂದಾಗಿ. ಶಾಲಾ ಶಿಕ್ಷಣ, ಸಾಕ್ಷರತಾ ಸಚಿವರಾದ ಮಧು ಬಂಗಾರಪ್ಪ

» ದಾವಣಗೆರೆ

ರಾಜ್ಯದಲ್ಲಿರುವ ಲಂಬಾಣಿ ಜನಾಂಗ ವಿಶಿಷ್ಟ ಸಂಸ್ಕೃತಿಯನ್ನು ಹೊಂದಿದೆ. ಈ ಜನರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಶಾಲಾ ಶಿಕ್ಷಣ, ಸಾಕ್ಷರತಾ ಸಚಿವರಾದ ಮಧು ಬಂಗಾರಪ್ಪನವರು ತಿಳಿಸಿದರು.

ಅವರು ಬುಧವಾರ ನ್ಯಾಮತಿ ತಾಲ್ಲೂಕಿನ ಭಾಯಗಡ್-ಸೂರಗೊಂಡನಕೊಪ್ಪದಲ್ಲಿ ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಆಡಳಿತ, ತಾಂಡಾ ಅಭಿವೃದ್ದಿ ನಿಗಮ, ಸಂತ ಸೇವಾಲಾಲ್ ಕ್ಷೇತ್ರ ಅಭಿವೃದ್ಧಿ ಮತ್ತು ನಿರ್ವಹಣಾ ಪ್ರತಿಷ್ಠಾನ, ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಸಂತ ಸೇವಾಲಾಲ್ ಮಹಾರಾಜರ 285ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಸಂತ ಸೇವಾಲಾಲರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಸಂತ ಸೇವಾಲಾಲ್ ರವರು 17, 18ನೇ ಶತಮಾನದಲ್ಲಿ ಅಹಿಂಸಾ ತತ್ವ, ಶಾಂತಿ ಸಂಕೇತವನ್ನು ಪ್ರತಿಪಾದಿಸಿದವರು. ಅಲೆಮಾರಿಯಾಗಿದ್ದ ಈ ಜನರ ನೆಲೆಗೊಂಡು ಸಾಂಸ್ಕೃತಿಕತೆ ಮತ್ತು ಆರ್ಥಿಕ ಮುನ್ನಡೆಯಲ್ಲಿ ಸಂತ ಸೇವಾಲಾಲ್ ರವರ ಪಾತ್ರ ಪ್ರಮುಖವಾಗಿದೆ.



ಬಂಜಾರ ಸಾಂಪ್ರದಾಯಿಕತೆ, ಮೌಖಿಕ ಸಾಹಿತ್ಯ, ವೇಷಭೂಷಣ, ಕಲೆ ಸಂರಕ್ಷಣೆ ಮಾಡಲು ಬದ್ಧವಾಗಿದೆ. ಈ ಜನಾಂಗದ ಸಂಘಟನೆಯಲ್ಲಿ ಪ್ರಮುಖವಾಗಿರುವ ಸೇವಾಲಾಲರು ಸೂರಗೊಂಡನಕೊಪ್ಪದಲ್ಲಿ ಹುಟ್ಟಿರುವುದು ಪುಣ್ಯಭೂಮಿಯಾಗಿದೆ ಎಂದರು.

ಸೂರಗೊಂಡನಕೊಪ್ಪ ಅಭಿವೃದ್ದಿಯಲ್ಲಿ ಸಂಘಟನಾತ್ಮಕವಾಗಿ ಕೆಲಸ ಮಾಡಲಾಗಿದೆ. ಇದೇ ರೀತಿ ತಮ್ಮ ಮಕ್ಕಳಿಗೂ ಶಿಕ್ಷಣ ಕೊಡಿಸುವ ಮೂಲಕ ಆಸ್ತಿವಂತರನ್ನಾಗಿ ಮಾಡಲು ಸಲಹೆ ನೀಡಿದರು.

ಜಯಂತಿ ಕಾರ್ಯಕ್ರಮದಲ್ಲಿ ವ'ುುಖ್ಯವ'ುಂತ್ರಿು'ುವ'ರ'ು ಭಾಗವಹಿಸಬೇಕಿತ್ತು, ಕಾರಣಾಂತರದಿಂದ ಬರಲು ಸಾಧ್ಯವಾಗಿಲ್ಲ. ಆದ್ದರಿಂದ ತಮ್ಮ ಸಂದೇಶದಲ್ಲಿ ರಾಜ್ಯ ಸರ್ಕಾರ ಲಂಬಾಣಿ ಜನಾಂಗದಸರ್ವಾಗಿಂಣಅಭಿವೃದ್ಧಿಗೆಎಲ್ಲಾ ಕ್ರಮ ಕೈಗೊಳ್ಳಲಿದ್ದು ನಿಮ್ಮ ಜೊತೆ ಇರಲಿದೆ ಎಂದರು. ಸೂರಗೊಂಡನಕೊಪ್ಪದಲ್ಲಿ ಶಾಲಾ, ಕಾಲೇಜು ಸ್ಥಾಪನೆ, ಇಲ್ಲಿಗೆ ಸಂಪರ್ಕಿಸುವ ರಸ್ತೆ ಅಭಿವೃದ್ಧಿಗೆ ನಿಮ್ಮ ಪರವಾಗಿ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತುವೆ ಎಂದರು. ಮಾಜಿ ಮುಖ್ಯಮಂತ್ರಿ ಬಂಗಾರಪ್ಪನವರು ಲಂಬಾಣಿ ಜನಾಂಗದೊಂದಿಗೆ ನಿಕಟ ಸಂಪರ್ಕವಿತ್ತು ಮತ್ತು ಈ ಜನರ ಅಭಿವೃದ್ಧಿಗೆ, ಬಡತನ ನಿವಾರಣೆಗೆ ಅವರಲ್ಲಿ ತುಡಿತವಿತ್ತು ಎಂದರು. ವಿಧಾನಸಭಾ ಉಪ ಸಭಾಪತಿ ಹಾಗೂ ಸಂತಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಅಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿಯವರು ಪ್ರಸ್ತಾವಿಕವಾಗಿ ಮಾತನಾಡಿ 1985ರಲ್ಲಿ ಸಮಾಜದ ಗಣ್ಯರು ಸೇರಿ ಕ್ಷೇತ್ರದ ಅಭಿವೃದ್ಧಿಗೆ ಅಡಿಗಲ್ಲು ಹಾಕುತ್ತಾರೆ. ಸರ್ಕಾರ ಮೊಟ್ಟ ಮೊದಲು ರೂ.1 ಕೋಟಿ ಅನುದಾನ ನೀಡಿತು. 2013ರ ನಂತರ ಸರ್ಕಾರ ಈ ಕ್ಷೇತ್ರದ ಅಭಿವೃದ್ದಿಗೆ 60 ಕೋಟಿಗೂ ಹೆಚ್ಚಿನ ಅನುದಾನ ನೀಡಿತು. ಮುಂದಿನ ದಿನಗಳಲ್ಲಿ ಸಮಾಜದ ಬಡ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು ರೂ. 50 ಕೋಟಿವರೆಗಿನ ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣ ಮಾಡುವ ಯೋಜನೆ ಇದ್ದು ಇದಕ್ಕಾಗಿ 15 ಎಕರೆ ಜಾಗ ಮಂಜೂರು ಮಾಡಲಾಗಿದೆ. ಧಾರ್ಮಿಕ ಸಂಸ್ಥೆಯ ಜೊತೆಗೆ ಕೌಶಲ್ಯಾಭಿವೃದ್ಧಿ, ಸರ್ಕಾರಿ ಐಟಿಐ ಕಾಲೇಜು ಆರಂಭಿಸಲು ಕಟ್ಟಡ ನಿರ್ಮಾಣ ಕಾಮಗಾರಿ ನಡೆಯುತ್ತಿದೆ ಎಂದರು.ಪ್ರತಿಷ್ಠಾನ ಮೂಲಕ ನೀಡಿದ 10 ಕೋಟಿಯಲ್ಲಿ ಗೋಶಾಲೆ, ಸೌರ ವಿದ್ಯುತ್ ಉತ್ಪಾದನೆ ಮಾಡುವ ಕೆಲಸ ನಡೆಯುತ್ತಿದೆ ಎಂದರು.ಇಲ್ಲಿ ಸಪ್ತಮಾತಕಿಯರ ಕೊಳದ ನಿರ್ಮಾಣ, ಹಳೇಜೋಗದಿಂದ ಚಿನ್ನಿಕಟ್ಟೆವರೆಗೆ ದ್ವಿಪಥ ರಸ್ತೆ ನಿರ್ಮಾಣವಾಗಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಧರ್ಮ ಗುರುಗಳಾದ ಬಾಬು ಸಿಂಗ್, ಸಾಲೂರು ಮಠದ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಹೊನ್ನಾಳಿ ಶಾಸಕರಾದ ಡಿ.ಜಿ.ಶಾಂತಗೌಡ ಅಧ್ಯಕ್ಷತೆ ವಹಿಸಿದ್ದರು. ಕಲಬುರ್ಗಿ ಸಂಸದರಾದ ಡಾ. ಉಮೇಶ್ ಜಾಧವ್, ಶಿವಮೊಗ್ಗ ಸಂಸದರಾದ ಬಿ.ಎಸ್.ರಾಘವೇಂದ್ರ, ವಿಧಾನ ಪರಿಷತ್ ಸದಸ್ಯ ಪ್ರಕಾಶ್ ಕೆ.ರಾಥೋಡ್, ಕೆ.ಎಂ.ಎಫ್ ಅಧ್ಯಕ್ಷರಾದ ಭೀಮಾನಾಯ್ಕ್, ಮಾಜಿ ಸಚಿವರಾದ ಪಿ.ಟಿ.ಪರಮೇಶ್ವರನಾಯ್ಕ್, ಶಿವಮೂರ್ತಿ ನಾಯ್ಕ್, ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ, ಮಹಾಮಠ ನಿರ್ವಹಣಾ ಸಮಿತಿ ಅಧ್ಯಕ್ಷರಾದ ಹನುಮಂತನಾಯ್ಕ, ಪ್ರಧಾನ ಧರ್ಮದರ್ಶಿ ಹೀರಾನಾಯ್ಕ್, ಕಾರ್ಯದರ್ಶಿ ಅರುಣ್ ಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸಂವಿಧಾನ ಜಾಗೃತಿ ಜಾಥಾದ ಅಂಗವಾಗಿ ಸಂವಿಧಾನ ಪೀಠಿಕೆ ಓದುವ ಮೂಲಕ ಪ್ರತಿಜ್ಞೆ ಸ್ವೀಕರಿಸಲಾಯಿತು.

## ಪರಿಶಿಷ್ಟ ಜಾತಿ ಮೀಸಲಾತಿ ಏರಿಕೆಗೆ ಆಗ್ರಹ

» ಚಳ್ಳಕೆರೆ

ರಾಜ್ಯ ಸರ್ಕಾರ ಎಸ್ಸಿ, ಎಸ್ಸಿ, ಟಿಎಸ್‌ಪಿ ಯೋಜನೆ 7(ಡಿ)ಕಲಂನ್ನು ರದ್ದುಪಡಿಸಿದ್ದು ಈ ಬಗ್ಗೆ ಕೂಡಲೇ ಸರ್ಕಾರ ಆದೇಶವನ್ನು ಪ್ರಕಟಿಸಬೇಕು. ಇದರಿಂದ ಈ ಹಿಂದೆ ಸುಮಾರು 70 ಸಾವಿರ ಕೋಟಿ ಪರಿಶಿಷ್ಟ ಜಾತಿಗೆ ನೀಡಬೇಕಾದ ಅನುದಾನ ನೀಡದೆ ವಂಚನೆಯಾಗಿದೆ. ಈ ಬಗ್ಗೆ ಸರ್ಕಾರ ಗಮನಹರಿಸಿ ಸದರಿ ಹಣವನ್ನು ಪರಿಶಿಷ್ಟ ಜಾತಿ ಸಮುದಾಯದ ಅಭ್ಯುದಯಕ್ಕೆ ಬಳಸಬೇಕೆಂದು ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪರಿವರ್ತನವಾದ) ಮಾನ್ಯ ಮುಖ್ಯಮಂತ್ರಿಗಳಿಗೆ ತಹಶೀಲ್ದಾರ್ ಮೂಲಕ ಮನವಿ ನೀಡಲಾಗಿದೆ.

ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ ಹೆಗ್ಗೆರೆ ಈ ಬಗ್ಗೆ ಮಾಹಿತಿ ನೀಡಿ, ಪ್ರಸ್ತುತ ಪರಿಶಿಷ್ಟ ಜಾತಿ ಸಮುದಾಯಕ್ಕೆ ಶೇ. 7ರಷ್ಟು ಮೀಸಲಾತಿಇದ್ದು, ಅದನ್ನು ಶೇ. 17ಕ್ಕೆ ಹೆಚ್ಚಿಸುವುದು ಸೇರಿದಂತೆ ನಮ್ಮ ಸಂಘಟನೆ ಸುಮಾರು 12ಕ್ಕೂ ಹೆಚ್ಚು ಬೇಡಿಕೆಗಳನ್ನು ಸರ್ಕಾರ ಈಡೇರಿಬೇಕು. ಈ ಬಗ್ಗೆ ಸಂಪೂರ್ಣ ಮಾಹಿತಿಯನ್ನುಮನವಿಯಲ್ಲಿತಿಳಿಸಿತಹಶೀಲ್ದಾರ್ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದರು.



ತಹಶೀಲ್ದಾರ್ ಪರವಾಗಿ ಶಿರಸ್ತೇದಾರ್ ಸದಾಶಿವಪ್ಪ,ಮನವಿ ಸ್ವೀಕರಿಸಿತಾವು ಮುಖ್ಯಮಂತ್ರಿಗಳಿಗೆ ನೀಡದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು. ಜಿಲ್ಲಾ ಸಂಘಟನಾ ಕಾರ್ಯದರ್ಶಿ ಡಿ.ಎನ್.ಬಿ. ಮಾರಣ್ಣ, ಸೂರನಹಳ್ಳಿ ಮಂಜುನಾಥ, ಓ.ಇಂದ್ರೇಶ್, ಸಿ.ವೀರೇಶ್, ರುದ್ರಪ್ಪ, ಟಿ.ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

## ಎನ್.ಬಳಿಗಟ್ಟೆ ಗ್ರಾಮದಲ್ಲಿ ವಾತ್ಸಲ್ಯ ಮನೆ ಹಸ್ತಾಂತರ



» ಚಿತ್ರದುರ್ಗ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹೇಮಾವತಿ ಅಮ್ಮನವರ ಕನಸಿನ ಕೂಸು ವಾತ್ಸಲ್ಯ ಮನೆಯನ್ನು ಎನ್.ಬಳಿಗಟ್ಟೆ ಗ್ರಾಮದಲ್ಲಿ ರತ್ನಮ್ಮ ಹಾಗೂ ರಾಮಪ್ಪ ದಂಪತಿಗಳಿಗೆ ವಿತರಿಸಲಾಯಿತು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ರತ್ನಮ್ಮ ರಾಮಪ್ಪ ದಂಪತಿಗಳಿಗೆ ವಾತ್ಸಲ್ಯ ಮನೆ ಹಸ್ತಾಂತರಿಸಿ ಮಾತನಾಡುತ್ತ ಗ್ರಾಮೀಣ ಭಾಗಗಳಲ್ಲಿ ವಾಸಿಸುವ ಅತ್ಯಂತ ಕಡು ಬಡವರನ್ನು ಗುರುತಿಸಿ ಡಾ.ಡಿ.ವೀರೇಂದ್ರ ಹೆಗಡೆರವರು ವಾತ್ಸಲ್ಯ ಮನೆಗಳನ್ನು ನಿರ್ಮಿಸಿ ಸೂರು ಕಲ್ಪಿಸುತ್ತಿದ್ದಾರಲ್ಲದೆ ಪ್ರತಿ ತಿಂಗಳು ಮಾಶಾಸನವನ್ನು ನೀಡುತ್ತಿದ್ದಾರೆಂದು ಹೇಳಿದರು. ಯೋಜನಾಧಿಕಾರಿ ಪ್ರವೀಣ್ ಎ.ಜೆ. ಗ್ರಾಮ ಪಂಚಾಯಿತಿ ಸದಸ್ಯರು, ಮುಖಂಡರು, ವಲಯದ ಜ್ಞಾನವಿಕಾಸ ಸಮನ್ವಯಾಧಿಕಾರಿ ವಾತ್ಸಲ್ಯ ಮನೆ ವಿತರಣೆ ಕಾರ್ಯಕ್ರಮದಲ್ಲಿ ಹಾಜರಿದ್ದರು.



ನಾಯಕನಹಟ್ಟಿ ಹೋಬಳಿಯ, ನೇರಲಗುಂಟೆ ಗ್ರಾಮದ ಶ್ರೀ ಆಂಜನೇಯ ಸ್ವಾಮಿ ರಥೋತ್ಸವಕ್ಕೆ ಆಗಮಿಸಿದ ಚಳ್ಳಕೆರೆ ಶಾಸಕ ಹಾಗೂ ನೂತನವಾದ ಸಣ್ಣ ಕೈಗಾರಿಕ ಅಭಿವೃದ್ಧಿ ನಿಗಮ ಮಂಡಳಿಯ ಅಧ್ಯಕ್ಷ ರಘುಮೂರ್ತಿ ರವರನ್ನು ಕಾಂಗ್ರೆಸ್ ಮುಖಂಡ ಬ್ಯಾಂಕ್ ಸೂರನಾಯಕ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಪ್ರಬಲ ಆಕಾಂಕ್ಷಿ ರಾಮಪ್ಪ, ಅಭಿನಂದನೆ ಸಲ್ಲಿಸಿದರು.

### ವ್ಯಕ್ತಿ ಕಾಣೆ

ದಾವಣಗೆರೆ: ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಕೊಮಾರನಹಳ್ಳಿ ಗ್ರಾಮದ ಮೋಹನ್ ಬಿನ್ ಕರಿಬಸಪ್ಪ 44 ವರ್ಷ, ಕುರುಬ ಜನಾಂಗದವರು ಇವರು ಕಳೆದ ದಿನಾಂಕ:26.1.2022 ರಂದು ಬೆಳಿಗ್ಗೆ 10 ಗಂಟೆಗೆ ಮನೆಯಿಂದ ಅಡುಗೆ ಕೆಲಸಕ್ಕೆ ಹೋಗಿ ಬರುತ್ತೇನೆಂದು ಹೇಳಿ ಹೋದವರು ಮನೆಗೆ ವಾಪಾಸ್ ಬರದೇ ಕಾಣೆಯಾಗಿರುತ್ತಾರೆ. ಚಹರೆ ವಿವರ: ಎತ್ತರ 168 ಸೆ.ಮೀ ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ಹೋಗುವಾಗ ನೀಲಿ ಬಣ್ಣದ ಶರ್ಟ್ ಮತ್ತು ಬಿಳಿ ಪಂಚೆಯನ್ನು ಧರಿಸಿರುತ್ತಾರೆ. ಮೇಲ್ಕಂಡ ವ್ಯಕ್ತಿಯ ಮಾಹಿತಿ ತಿಳಿದುಬಂದಲ್ಲಿ ದೂ.ಸಂ: 08192-268758, ಎಸ್‌ಡಿಪಿಓ ದೂ.ಸಂ:08192-272016, ಡಿಪಿಓ ದೂ.ಸಂ: 08192-262550 ಕರೆ ಮಾಡಬಹುದೆಂದು ಮಲೇಬೆನ್ನೂರು ಪೊಲೀಸ್ ಠಾಣೆಯ ಪಿಎಸ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಕರ್ನಾಟಕ ರಾಜ್ಯ ಕೈಗಾರಿಕೆಗಳ ಮಂಡಳಿಯ ಅಧ್ಯಕ್ಷ ಸ್ಥಾನ ಪಡೆದ ಶಾಸಕ ರಘುಮೂರ್ತಿ ವಿವಿಧ ದೇವಸ್ಥಾನಗಳಿಗೆ ಭೇಟಿ, ಪೂಜೆ

» ಚಳ್ಳಕೆರೆ

ಕರ್ನಾಟಕರಾಜ್ಯಕೈಗಾರಿಕಗಳಮಂಡಳಿಯ ನೂತನ ಅಧ್ಯಕ್ಷ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ನಿಗಮಮಂಡಳಿ ಅಧ್ಯಕ್ಷ ಸ್ಥಾನ ವಹಿಸಿಕೊಂಡ ನಂತರ ಇದೇ ಮೊದಲ ಬಾರಿಗೆ ತಮ್ಮ ಕ್ಷೇತ್ರಕ್ಕೆ ಆಗಮಿಸಿ ಬುಡ್ನಹಟ್ಟಿ ಗ್ರಾಮದ ದುರ್ಗಾಂಭಿಕ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.





ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪಕ್ಷವನ್ನುಗೆಲ್ಲಿಸುವ ದೃಷ್ಟಿಯಿಂದ ರಾಜ್ಯ ಕೆಪಿಸಿಸಿ ನೀಡಿದ ಸೂಚನಯಂತೆ ಮಂಡಳಿ ಅಧ್ಯಕ್ಷ ಸ್ಥಾನ ವಹಿಸಿಕೊಂಡಿದ್ದೇನೆ. ರಾಜಕೀಯ ಕ್ಷೇತ್ರದಲ್ಲಿ ಕೆಲವೊಮ್ಮೆ ಬದಲಾವಣೆಗೆ ಒಪ್ಪಿಕೊಳ್ಳಬೇಕಾಗುತ್ತದೆ.ನಾನುಶಾಸಕನಾಗಿ ಎಷ್ಟು ಸಂತೋಷವಾಗಿದ್ದೇನೋ ಅಷ್ಟೇ ಸಂತೋಷ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿದಾಗಲೂ ಇದೆ. ಕ್ಷೇತ್ರದ ಜನತೆಗೆ ಸೇವೆ ಸಲ್ಲಿಸಲು ನನಗೆ ಪಕ್ಷ ಹೆಚ್ಚಿನ ಜವಾಬ್ದಾರಿಯನ್ನು ನಿಗಮ ಮಂಡಳಿ ಅಧ್ಯಕ್ಷ ಸ್ಥಾನದ ಮೂಲಕ ನೀಡಿದೆ ಎಂದು ಭಾವಿಸಿದ್ದೇನೆಂದರು.

ತಾಲ್ಲೂಕಿನ ನೇರಲಗುಂಟೆ ಗ್ರಾಮದಲ್ಲಿ ಶ್ರೀಆಂಜನೇಯಸ್ವಾಮಿಯ ರಥೋತ್ಸವ ನಡೆಯುತ್ತಿರುವ ಹಿನ್ನೆಲೆಯಲ್ಲಿ ಶಾಸಕರು, ನಿಗಮ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ನಾನು ಸಹ ಎಲ್ಲಾ ದೇವರಲ್ಲಿ ಅಪಾರವಾದ ಭಕ್ತಿ, ಶ್ರದ್ದೆ ಹೊಂದಿದ್ದೇನೆ. ದೇವರ ಪೂಜಾ ಕಾರ್ಯಕ್ರಮಗಳಿಂದ ವೈಯಕ್ತಿಯವಾಗಿ ನೆಮ್ಮದಿಯ ಜೊತೆಗ ಮತ್ತಷ್ಟು ಕೆಲಸ ಮಾಡಲು ಸ್ಪೂರ್ತಿ ಬರುತ್ತದೆ ಎಂದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರಲಗುಂಟೆ ರಾಮಪ್ಪ, ಕಾಂಗ್ರೆಸ್ ಮುಖಂಡರಾದ ಬ್ಯಾಂಕ್‌ಸೂರನಾಯಕ, ನಗರಸಭೆ ಸದಸ್ಯರಾದ ಎಂ.ಜೆ. ರಾಘವೇಂದ್ರ, ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ತಿಪ್ಪೇಶ್, ಬುಡ್ನಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಮಲತ, ಕಾಂಗ್ರೆಸ್ ಮುಖಂಡ ಕಳ್ಳಿನಿಂಗಯ್ಯ, ಇಮಾಮ್, ರೈತ ಮುಖಂಡ ತಿಪ್ಪೇಸ್ವಾಮಿ, ಬೋರಯ್ಯ, ಮಾಜಿ ಅಧ್ಯಕ್ಷ ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T